# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್. ಬಿ. ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 301 ₹4, FRIDAY, 26 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26

## ನೀರೆತ್ತುವ ಯೋಜನೆಗೆ ಚಾಲನೆ ನೀಡುವ ವೇಳೆ ಕರೆಂಟ್ ಕಟ್

### ಮುಜುಗರಕ್ಕೊಳಗಾದ ಸಿಎಂ; ಚೆಸ್ಕಾಂ ಎಂಡಿ ಅಮಾನತು

ಮೈಸೂರು: ಸಿಎಂ ಸಿದ್ದರಾಮಯ್ಯ ಕಾರ್ಯಕ್ರಮದಲ್ಲಿ ವಿದ್ಯುತ್ ಕಟ್ ಆಗಿದ್ದರಿಂದ ಮುಖ್ಯಮಂತ್ರಿಗಳು ಮುಜುಗರಕ್ಕೊಳಗಾದ ಸನ್ನಿವೇಶ ಮೈಸೂರಿನ ಪಿರಿಯಾಪಟ್ಟಣದಲ್ಲಿ ನಡೆದಿದೆ. ಈ ಹಿನ್ನೆಲೆ ಕರ್ತವ್ಯ ಲೋಪದಡಿ ಚೆಸ್ಕಾಂ ಎಂಡಿ ಸಿ.ಎನ್.ಶ್ರೀಧರ್ ಅವರನ್ನು ಅಮಾನತು ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಕಾವೇರಿ ನದಿ ನೀರನ್ನು ಎತ್ತಿ ಪಿರಿಯಾಪಟ್ಟಣ ತಾಲೂಕಿನ 150 ಕೆರೆಗಳನ್ನು ತುಂಬಿಸುವ ಯೋಜನೆಗೆ ಬಟನ್ ಒತ್ತುವ ಮೂಲಕ ಚಾಲನೆ ನೀಡಬೇಕಿತ್ತು. ಆದ್ರೆ ಸಿಎಂ ಬಟನ್ ಒತ್ತಿದ್ದ ವೇಳೆ ವಿದ್ಯುತ್ ಕಟ್ ಆಗಿದ್ರಿಂದ ಮೋಟರ್ ಆನ್ ಆಗಲಿಲ್ಲ. ಇದರಿಂದ ಸಿಎಂ ಮುಜುಗರಕ್ಕೆ ಒಳಗಾದರು.

ಸಿಎಂ ಭಾಗವಹಿಸುವ ಕಾರ್ಯಕ್ರಮದ ಸ್ಥಳಗಳಲ್ಲಿ ಸಮರ್ಪಕ ವಿದ್ಯುತ್ ವ್ಯವಸ್ಥೆಯ ಮುನ್ನೆಚ್ಚರಿಕೆ ಕ್ರಮಗಳನ್ನು ನಿರ್ವಹಿಸಲು ಚೆಸ್ಕಾಂ ಎಂಡಿ ಸಿ.ಎನ್.ಶ್ರೀಧರ್ ಅವರಿಗೆ



ಮೈಸೂರು ಜಿಲ್ಲಾಧಿಕಾರಿ ಅಧಿಕೃತ ಜ್ಞಾಪನದ ಆದೇಶದಲ್ಲಿ ಸೂಚನೆ ನೀಡಿದ್ದರು. ಚೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರು ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಖುದ್ದು ಹಾಜರಿದ್ದು, ಯಾವುದೇ ಲೋಪ ಉಂಟಾಗದಂತೆ ವ್ಯವಸ್ಥಿತವಾಗಿ ಕರ್ತವ್ಯ ನಿರ್ವಹಿಸಬೇಕಿತ್ತು. ಆದರೆ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿಲ್ಲ. ವ್ಯವಸ್ಥಿತವಾಗಿ ಕಾರ್ಯಕ್ರಮಗಳು ಯಶಸ್ವಿಗೊಳಿಸಲು ಸಹಕರಿಸದೇ ಕರ್ತವ್ಯದಲ್ಲಿ ಅಸಡ್ಡೆ ಮತ್ತು ನಿರ್ಲಕ್ಷ್ಯತನ ತೋರಿಸಿದ್ದಾರೆ. ಈ ಮೂಲಕ ಸರ್ಕಾರವನ್ನು ಮುಜುಗರಕ್ಕೀಡು ಮಾಡಿದ್ದಾರೆ. ಹಾಗಾಗಿ, ಈ ಸನ್ನಿವೇಶ ಸೃಷ್ಟಿಯಾಗಲು ಅವರು ನೇರ ಕಾರಣಕರ್ತರು ಎಂದು ಅಮಾನತು ಆದೇಶದಲ್ಲಿ ಕಾರಣಗಳನ್ನು ಉಲ್ಲೇಖಿಸಲಾಗಿದೆ.

ಕಾವೇರಿ ನದಿಯಿಂದ ನೀರೆತ್ತಿ 79 ಗ್ರಾಮಗಳಲ್ಲಿ ಬರುವ 150 ಕೆರೆ, ಕಟ್ಟೆಗಳಿಗೆ ತುಂಬಿಸುವ ಯೋಜನೆಯ ಉದ್ಘಾಟನೆಗೆ ಸಿದ್ದರಾಮಯ್ಯ ಆಗಮಿಸಿ, ಉದ್ಘಾಟನೆ ಕಾರ್ಯ ನೆರವೇರಿಸುತ್ತಿದ್ದರು.

ಬೃಹತ್ ಸಾರ್ವಜನಿಕ ಯೋಜನೆಯ ಲೋಕಾರ್ಪಣೆಗಾಗಿ ವಿಧ್ಯುಕ್ತವಾಗಿ ಬಟನ್ ಒತ್ತುವ ಮೂಲಕ ಚಾಲನೆ ನೀಡುವಾಗ ಅದು ಚಾಲನೆಯಾಗಲಿಲ್ಲ. ಇದರಿಂದ ಮುಖ್ಯಮಂತ್ರಿ ತೀವ್ರ ಮುಜುಗರ ಅನುಭವಿಸಿದರು. ಚೆಸ್ಕಾಂ ಎಂಡಿ ಸ್ಥಳದಲ್ಲಿ ಹಾಜರಿಲ್ಲದೇ ಕರ್ತವ್ಯ ಲೋಪವೆಸಗಿರುವ ಸಂಬಂಧ ಮತ್ತು ಶಿಷ್ಟಾಚಾರ ಉಲ್ಲಂಘಿಸಿರುವ ಹಿನ್ನೆಲೆಯಲ್ಲಿ ತತ್‌ಕ್ಷಣವೇ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಲಾದ ಪ್ರಸ್ತಾವನೆಯನ್ನು ಪರಿಶೀಲಿಸಿ, ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಗೈರಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸದೇ ತೀವ್ರ ಮುಜುಗರ ಉಂಟುಮಾಡುವ ಹಾಗೂ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದು ಜಿಲ್ಲಾಧಿಕಾರಿಯವರ ವರದಿಯಂತೆ ಸ್ಪಷ್ಟವಾಗಿ ಕಂಡುಬರುತ್ತದೆ. ಹಾಗಾಗಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇರಿಸಿ ಅಮಾನತುಪಡಿಸಲು ತೀರ್ಮಾನಿಸಿ ಆದೇಶಿಸಲಾಗಿದೆ.

## ನಾನು ಬಿಜೆಪಿಗೆ ಹೋಗಲ್ಲ

### ಶಾಸಕ ಲಕ್ಷ್ಮಣ್ ಸವದಿ ಸ್ಪಷ್ಟನೆ



ಬೆಂಗಳೂರು: ನನ್ನ ನಿಲುವು ಸ್ಪಷ್ಟ. ನಾನು ಬಿಜೆಪಿಗೆ ಹೋಗಲ್ಲ ಎಂದು ಶಾಸಕ ಲಕ್ಷ್ಮಣ್ ಸವದಿ ಹೇಳಿದ್ದಾರೆ.

ಜಗದೀಶ್ ಶೆಟ್ಟರ್ ಬೆನ್ನಲ್ಲೇ ಸವದಿ ಕೂಡ ಬಿಜೆಪಿ ಸೇರುತ್ತಾರೆ ಎಂಬ ವಿಚಾರಕ್ಕೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ನಾನು, ಅವರು ಒಟ್ಟಿಗೆ ನಿರ್ಧಾರ ಮಾಡಿರಲಿಲ್ಲ. ನಾನು ಮೊದಲು ಕಾಂಗ್ರೆಸ್ಗೆ ಬಂದೆ. ಟಿಕೆಟ್ ಸಿಗದ ಕಾರಣ ಅವರು ನಂತರ ಬಂದರು. ಯಾಕೆ ಹೋಗಿದ್ದಾರೆ ಅಂತ ಗೊತ್ತಿಲ್ಲ, ಅವರನ್ನೇ ಕೇಳಬೇಕು. ನನ್ನನ್ನ ಬಿಜೆಪಿ ಸಂಪರ್ಕ ಮಾಡಿಲ್ಲ, ಆ ಪ್ರಶ್ನೆಯೇ ಇಲ್ಲ. ಬಿಜೆಪಿಗೆ ಲೋಕಸಭೆ ಅಗತ್ಯ, ಅನಿವಾರ್ಯ ಇದೆ. ಹಾಗಾಗಿ ಎಲ್ಲರನ್ನ ಸಂಪರ್ಕ ಮಾಡುತ್ತಿದ್ದಾರೆ. ನಾನು ಎಲ್ಲೂ ಹೋಗಲ್ಲ. ಇದು ನನ್ನ ತೀರ್ಮಾನ ಎಂದರು. ರಾಷ್ಟ್ರೀಯ ಪಕ್ಷಗಳು ಬ್ಯಾಲೆನ್ಸ್ ಆಗಿರುತ್ತೆ. ನನ್ನಿಂದಲೇ ಎಲ್ಲಾ ಆಗುತ್ತೆ ಅನ್ನೋಕೆ ಆಗಲ್ಲ. ಶೆಟ್ಟರ್ ಹೋಗಿರೋದು ದೊಡ್ಡ ಬದಲಾವಣೆ ಆಗೋದಿಲ್ಲ ಅನಿಸುತ್ತೆ. ಶೆಟ್ಟರ್ ವೈಯಕ್ತಿಕ ವಿಚಾರವಾಗಿ ನಿರ್ಧಾರ ಮಾಡಿದ್ದಾರೆ. ನನ್ನ ನಿರ್ಧಾರ ಸ್ಪಷ್ಟವಾಗಿದೆ. ನಾನು ಎಲ್ಲೂ ಹೋಗಲ್ಲ ಎಂದರು. ಅವರ ನಿರ್ಧಾರ ಗೊತ್ತಿಲ್ಲ: ಈಗ ಯಾಕೆ ಬಿಜೆಪಿಗೆ ಹೋಗಿದ್ದಾರೆ ಅಂತ ಗೊತ್ತಿಲ್ಲ. ನಾನು ಅವರು ಸ್ನೇಹಿತರು. ದಿನ ನಾವಿಬ್ಬರು ಮಾತನಾಡುತ್ತೇವೆ. ಆದರೆ ಅವರು ಈ ನಿರ್ಧಾರ ಮಾಡ್ತಾರೆ ಅಂತ ಗೊತ್ತಿರಲಿಲ್ಲ. ಲೋಕಸಭೆ ಚುನಾವಣಾ ಹಿನ್ನೆಲೆ ಅವರಿಗೆ ನಮ್ಮ ಅನಿವಾರ್ಯತೆ ಇದೆ. ಹಾಗಾಗಿ ಸಂಪರ್ಕ ಮಾಡ್ತಾ ಇದ್ದಾರೆ ಎಂದ ಅವರು, ಸಚಿವ ಸ್ಥಾನ ನೀಡುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಅದರ ಬಗ್ಗೆ ಈಗ ಮಾತನಾಡೋದು ಸೂಕ್ತ ಅಲ್ಲ. ಪಕ್ಷ ಏನು ಹೇಳುತ್ತೋ ಅದನ್ನ ಮಾಡುತ್ತೇನೆ ಎಂದು ಹೇಳಿದರು.

ಇದೇ ವೇಳೆ ಬುಧವಾರ ಸಿಎಂ ಭೇಟಿ ಮಾಡಿದ ವಿಚಾರಕ್ಕೆ ಪ್ರತಿಕ್ರಿಯಿಸಿ, ಕ್ಷೇತ್ರದ ಅನುದಾನ ವಿಚಾರವಾಗಿ ಭೇಟಿಯಾಗಿದ್ದೆ. ಕೃಷಿ ಕಾಲೇಜಿನ ಬಗ್ಗೆ ಬಜೆಟ್ ನಲ್ಲಿ ಅನುದಾನ ಬಿಡುಗಡೆ ಸಂಬಂಧ ಚರ್ಚಿಸಲು ಹೋಗಿದ್ದೆ. ಬೇರೆ ರಾಜಕೀಯ ಚರ್ಚೆ ಇಲ್ಲ. ದೆಹಲಿಗೆ ಹೋಗುವುದಾದರೆ ಹೇಳಿಯೇ ಹೋಗುತ್ತೇನೆ. ಎಂದರು.



## ಗಣರಾಜ್ಯೋತ್ಸವ: ಭಾರತಕ್ಕೆ ಬಂದಿಳಿದ ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್

ಬೆಂಗಳೂರು: ಗಣರಾಜ್ಯೋತ್ಸವ ಆಚರಣೆಗಾಗಿ ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್ ಅವರು ಭಾರತಕ್ಕೆ ಬಂದಿಳಿದಿದ್ದಾರೆ.

ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೊದಲು ಪಶ್ಚಿಮ ಭಾರತದ ಜೈಪುರ ನಗರಕ್ಕೆ ಆಗಮಿಸಿದರು, ಅಲ್ಲಿ ಅವರನ್ನ ಮುಖ್ಯ ಅತಿಥಿಯಾಗಿ ಆಹ್ವಾನಿಸಲಾಗಿದೆ. ಪಾರಂಪರಿಕ ತಾಣಗಳ ಪ್ರವಾಸ ಮತ್ತು ರೋಡ್ ಶೋನಲ್ಲಿ ಮ್ಯಾಕ್ರನ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಕೂಡ ಸೇರಲಿದ್ದಾರೆ.



## ನೆಲಕ್ಕೆ ಅಪ್ಪಳಿಸಿದ ರಷ್ಯಾ ಯುದ್ಧ ವಿಮಾನ


### 65 ಉಕ್ರೇನ್ ಯುದ್ಧ ಕೈದಿಗಳ ದಾರುಣ ಸಾವು

ಮಾಸ್ಕೋ: ಯುದ್ಧ ಕೈದಿಗಳಿಂದ್ದ ರಷ್ಯಾ ಯುದ್ಧ ವಿಮಾನವೊಂದು ನೆಲಕ್ಕೆ ಅಪ್ಪಳಿಸಿದ್ದು, ಈ ದುರ್ಘಟನೆಯಲ್ಲಿ ಉಕ್ರೇನ್ ಸುಮಾರು 65 ಮಂದಿ ಯುದ್ಧ ಕೈದಿಗಳ ದಾರುಣ ಸಾವನ್ನಪ್ಪಿದ್ದಾರೆ ಎಂದು ಹೇಳಲಾಗಿದೆ.

65 ಉಕ್ರೇನ್ ಯುದ್ಧ ಕೈದಿಗಳನ್ನು ಹೊತ್ತೊಯ್ಯುತ್ತಿದ್ದ ಸೇನಾ ಸಾರಿಗೆ ವಿಮಾನವು ಉಕ್ರೇನ್ ಗಡಿಯ ಬೆಲ್ಗೊರೊಡ್ ಪ್ರದೇಶದಲ್ಲಿ ಅಪಘಾತಕ್ಕೀಡಾಗಿದ್ದು, ವಿಮಾನದಲ್ಲಿದ್ದ ಎಲ್ಲರೂ ಸಾವಿಗೀಡಾಗಿದ್ದಾರೆ. ಈ ವಿಮಾನ ಪತನದ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ಭಾರೀ ವೈರಲ್ ಆಗಿದ್ದು, ಐಎಲ್ – 76 ಸೇನಾ ಸಾರಿಗೆ ವಿಮಾನವು ಬೆಲ್ಗೊರೊಡ್ ಪ್ರದೇಶದಲ್ಲಿ ಮಾಸ್ಕೋ ಸ್ಥಳೀಯ ಕಾಲಮಾನ ಪ್ರಕಾರ 11 ಗಂಟೆಗೆ ಪತನವಾಯಿತು ಎಂದು ಮಾಸ್ಕೋ ರಕ್ಷಣಾ ಸಚಿವಾಲಯವು ರಷ್ಯಾದ ಸುದ್ದಿ ಸಂಸ್ಥೆಗೆ ತಿಳಿಸಿದೆ.

ಮೂಲಗಳ ಪ್ರಕಾರ ಪತನಕ್ಕೀಡಾದ ವಿಮಾನದಲ್ಲಿ ಉಕ್ರೇನ್‌ನ 65 ಯುದ್ಧ ಕೈದಿಗಳಿದ್ದರು. ಜತೆಗೆ ಆರು ಸಿಬ್ಬಂದಿ ಹಾಗೂ ಮೂರು ಎಸ್ಕಾರ್ಟ್ಸ್ ಪ್ರಯಾಣಿಸುತ್ತಿದ್ದರು. ವಿನಿಮಯಕ್ಕೆ ಯುದ್ಧ ಕೈದಿಗಳನ್ನು ಬೆಲ್ಗೆರೊಡ್ ಪ್ರದೇಶಕ್ಕೆ ಕರೆದುಕೊಂಡು ಹೋಗಲಾಗುತ್ತಿತ್ತು. ರಷ್ಯಾದ ರಕ್ಷಣಾ ಸಚಿವಾಲಯವು ತನ್ನ ಹೇಳಿಕೆಯಲ್ಲಿ ತಿಳಿಸಿದೆ.

## ಇತಿಹಾಸ ಸೃಷ್ಟಿಸಿದ ಮೇರಿ ಕೋಮ್ ಬಾಕ್ಸಿಂಗ್ ಗೆ ವಿದಾಯ



ದೆಹಲಿ: ವಿಶ್ವ ಮತ್ತು ಒಲಿಂಪಿಕ್ ಚಾಂಪಿಯನ್ ಮೇರಿ ಕೋಮ್ ಬಾಕ್ಸಿಂಗ್‌ಗೆ ವಿದಾಯ ಹೇಳಿದ್ದಾರೆ.

ಆರು ಬಾರಿಯ ವಿಶ್ವ ಚಾಂಪಿಯನ್ ಮತ್ತು 2012 ರ ಒಲಿಂಪಿಕ್ ಪದಕ ವಿಜೇತೆ ಮಾಂಗ್ಟೆ ಚುಂಗ್ನೀಜಾಂಗ್ ಮೇರಿ ಕೋಮ್ ಅವರು ಅಂತರರಾಷ್ಟ್ರೀಯ ಬಾಕ್ಸಿಂಗ್ ಅಸೋಸಿಯೇಷನ್ ನಿಯಮಗಳು 40 ವರ್ಷಕ್ಕಿಂತ ಕಡಿಮೆ ವಯಸ್ಸಿನ ಪುರುಷ ಮತ್ತು ಮಹಿಳಾ ಬಾಕ್ಸರ್‌ಗಳಿಗೆ ಗಣ್ಯ ಮಟ್ಟದ ಬಾಕ್ಸಿಂಗ್ ಸ್ಪರ್ಧೆಗಳಲ್ಲಿ ಸ್ಪರ್ಧಿಸಲು ಅವಕಾಶ ನೀಡುತ್ತವೆ. ಆದ್ದರಿಂದ ಅವರು ತಮ್ಮ ಬಾಕ್ಸಿಂಗ್‌ಗೆ ವಿರಾಮ ನೀಡಿದ್ದಾರೆ.

## ರಾಜ್ಯದಲ್ಲಿಂದು 76 ಕೊರೋನಾ ಸೋಂಕು ಪ್ರಕರಣ ದೃಢ

ಬೆಂಗಳೂರು: ಕಳೆದ 24 ಗಂಟೆಗಳಲ್ಲಿ ರಾಜ್ಯದಲ್ಲಿ ಹೊಸದಾಗಿ 76 ಕೊರೋನಾ ಸೋಂಕು ಪ್ರಕರಣ ದೃಢಪಟ್ಟಿದೆ. 109 ಸೋಂಕಿತರು ಗುಣಮುಖರಾಗಿದ್ದಾರೆ. ಸಾವಿನ ಸಂಖ್ಯೆ ಶೂನ್ಯವಾಗಿದ್ದು, ಒಟ್ಟು ಸಕ್ರಿಯ ಪ್ರಕರಣಗಳ ಸಂಖ್ಯೆ 349 ಆಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ನೀಡಿದೆ.

ಬೆಂಗಳೂರು ನಗರದಲ್ಲಿ 25 ಹೊಸ ಪ್ರಕರಣಗಳು ವರದಿಯಾಗಿದ್ದು, 18 ಮಂದಿ ಸೋಂಕಿನಿಂದ ಗುಣಮುಖರಾಗಿದ್ದಾರೆ. ಮೈಸೂರಿನಲ್ಲಿ 9, ಬಳ್ಳಾರಿ, ಮಂಡ್ಯ, 6, ತುಮಕೂರಿನಲ್ಲಿ 5, ವಿಜಯನಗರದಲ್ಲಿ 4, ಕೋಲಾರ, ಗದಗ, ದಕ್ಷಿಣ ಕನ್ನಡ, ಬೆಂಗಳೂರು ಗ್ರಾಮಾಂತರ, ಬೆಳಗಾವಿಯಲ್ಲಿ ತಲಾ 2 ಪ್ರಕರಣಗಳು ವರದಿಯಾಗಿವೆ.

ಕಳೆದ 24 ಗಂಟೆಗಳಲ್ಲಿ ಒಟ್ಟಾರೆ 5,037 ಪರೀಕ್ಷೆ ಮಾಡಲಾಗಿದ್ದು, ಪಾಸಿಟಿವಿಟಿ ದರ ಶೇ. 1.50 ರಷ್ಟಿದ್ದು, ಮರಣ ಪ್ರಮಾಣ ಶೇ. 0.00 ಆಗಿದೆ.

## ಗಣರಾಜ್ಯೋತ್ಸವದ ಪ್ರಯುಕ್ತ 21 ಪೊಲೀಸ್ ಅಧಿಕಾರಿಗಳಿಗೆ ರಾಷ್ಟ್ರಪತಿ ಪದಕ

ಬೆಂಗಳೂರು: ಗಣರಾಜ್ಯೋತ್ಸವದ ಪ್ರಯುಕ್ತ ರಾಷ್ಟ್ರಪತಿ ಪದಕ ಘೋಷಣೆ ಮಾಡಲಾಗಿದ್ದು, ಕರ್ನಾಟಕದ 21 ಪೊಲೀಸ್ ಅಧಿಕಾರಿಗಳು ರಾಷ್ಟ್ರಪತಿ ಪದಕಕ್ಕೆ ಭಾಜನರಾಗಿದ್ದಾರೆ.

ಶುಕ್ರವಾರ 75ನೇ ಗಣರಾಜ್ಯೋತ್ಸವ ಸಮಾರಂಭ ನಡೆಯಲಿದ್ದು, ಪದಕ ಪ್ರದಾನ ಮಾಡಲಾಗುತ್ತದೆ. ವಿಶಿಷ್ಟ ಸೇವೆಗಾಗಿ ಎಡಿಜಿಪಿ ಸೌಮೇಂದ್ರ ಮುಖರ್ಜಿ ಹಾಗೂ ಡಿವೈಎಸ್ಪಿ ಸುಧೀರ್ ಮಹದೇವ್ ಹೆಗ್ಡೆಗೆ ರಾಷ್ಟ್ರಪತಿ ಪದಕ ಘೋಷಣೆಯಾಗಿದೆ.

ಗಮನಾರ್ಹ ಸೇವೆ ಗುರುತಿಸಿ ಪೊಲೀಸರಿಗೆ ರಾಷ್ಟ್ರಪತಿ ಪದಕ ಘೋಷಣೆ ಮಾಡಲಾಗಿದೆ. ಐಜಿಪಿ ಪ್ರವೀಣ್ ಮಧುಕರ್ ಪವಾರ್, ಐಜಿಪಿ ರಮಣ್ ಗುಪ್ತಾ, ಎಎಸ್ಪಿ ಅನಿಲ್ಕುಮಾರ್.ಎಸ್, ಎಸಿಪಿ ಶಿವಗಂಗೆ ಪುಟ್ಟರಂಗಪ್ಪ, ಡಿವೈಎಸ್ಪಿ ರಘು ಕುಮಾರ್, ಎಸಿಪಿ ನಾರಾಯಣಸ್ವಾಮಿ, ಡಿವೈಎಸ್ಪಿ ಶ್ರೀನಿವಾಸ್ ರಾಜ್ ಬೆಟ್ಟೋಲಿ ರಾಷ್ಟ್ರಪತಿ ಪದಕಕ್ಕೆ ಭಾಜನರಾಗಿದ್ದಾರೆ. ಪೊಲೀಸ್ ಇನ್ಸ್ಪೆಕ್ಟರ್ ಮಾಸ್ತೇನಹಳ್ಳಿ ರಾಮಪ್ಪ



ಹರೀಶ್, ಇನ್ಸ್ಪೆಕ್ಟರ್ ಸಣ್ಣ ರಂಗಪ್ಪ ವಿರೇಂದ್ರ ಪ್ರಸಾದ್, ಸಬ್ ಇನ್ಸ್ಪೆಕ್ಟರ್ ದಾದಾಪೀರ್ ಕಣ್ಣೂರ್ ಸಾಬ್, ವೈರಲೆಸ್ ಎಎಸ್‌ಐ ಸುರೇಶ್ ರಾಮಪ್ಪ ಪುಂಡಲಿಕಟ್ಟಿ, ಎಎಸ್‌ಐ ರಾಮ, ಎಸ್ಪಿ ಕಮಾಂಡೆಂಟ್ ಸಿಬ್ಬಂದಿ ನಾಗರಾಜ್ ಅಂಜಪ್ಪ, ಹೆಡ್ ಕಾನ್ಸ್ಟೇಬಲ್ ಸಿ.ವಿ.ಗೋವಿಂದರಾಜು, ಹೆಡ್ ಕಾನ್ಸ್ಟೇಬಲ್ ಮಣಿಕಂಠ ಮಂದರ್ ಬೈಲ್, ಎಎಸ್‌ಐ ಸಮಂತ್.ಎಸ್, ಹೆಡ್ ಕಾನ್ಸ್ಟೇಬಲ್ ನರಸಿಂಹರಾಜು ಎಸ್.ಎನ್, ಎಸ್‌ಐ ಪುಂಡಲಿಕ್ ಜೆ.ವಿ.ರಾಮರಾವ್ ನಾಯಕ್ಗೆ ರಾಷ್ಟ್ರಪತಿ ಪದಕ ಘೋಷಣೆಯಾಗಿದೆ.

ಒಟ್ಟು 1132 ಸಿಬ್ಬಂದಿಗೆ ಮೆಡಲ್: 2024 ರ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಪೊಲೀಸ್, ಅಗ್ನಿಶಾಮಕ ಸೇವೆ, ಗೃಹ ರಕ್ಷಕ ಮತ್ತು ಸಿವಿಲ್ ಡಿಫೆನ್ಸ್ & ಕರೆಕ್ಷನಲ್ ಸೇವೆಯ ಒಟ್ಟು 1132 ಸಿಬ್ಬಂದಿಗೆ ಶೌರ್ಯ / ಸೇವಾ ಪದಕಗಳನ್ನು ಘೋಷಣೆ ಮಾಡಲಾಗಿದೆ. ವಿವಿಧ ಪ್ರಶಸ್ತಿಗಳ ಘೋಷಣೆ ವ್ಯವಸ್ಥೆಯನ್ನು ತರ್ಕಬದ್ಧಗೊಳಿಸಲು ಮತ್ತು ಪರಿವರ್ತಿಸಲು ಸರ್ಕಾರವು ಇತ್ತೀಚಿನ ವರ್ಷಗಳಲ್ಲಿ ಹಲವು ಕ್ರಮಗಳನ್ನು ತೆಗೆದುಕೊಂಡಿದೆ. ಈ ನಿಟ್ಟಿನಲ್ಲಿ, ಹದಿನಾರು ಶೌರ್ಯ / ಸೇವಾ ಪದಕಗಳನ್ನು (ಪೊಲೀಸ್, ಅಗ್ನಿಶಾಮಕ ಸೇವೆ, ಗೃಹರಕ್ಷಕ ಮತ್ತು ಸಿವಿಲ್ ಡಿಫೆನ್ಸ್ & ಕರೆಕ್ಷನಲ್ ಸೇವೆ) ತರ್ಕಬದ್ಧಗೊಳಿಸಲಾಗಿದೆ ಮತ್ತು ನಾಲ್ಕು ಪದಕಗಳನ್ನು ವಿಲೀನಗೊಳಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯದ ಪ್ರಕಟಣೆ ತಿಳಿಸಿದೆ.

## ರಾಮಮೂರ್ತಿಗೆ ಕೃಷ್ಣಶಿಲೆ ಕೊಟ್ಟಾತನಿಗೆ 80 ಸಾವಿರ ರೂ. ದಂಡ: ಸರ್ಕಾರದ ವಿರುದ್ಧ ಬಿಜೆಪಿ ಕಿಡಿ

ಬೆಂಗಳೂರು: ಆಯೋಧ್ಯೆಯ ಶ್ರೀರಾಮ ಮಂದಿರದಲ್ಲಿ ಪ್ರಾಣ ಪ್ರತಿಷ್ಠಾಪನೆಗೆ ಆಯ್ಕೆಯಾಗಿರುವ 'ಬಾಲರಾಮ'ನ ಮೂರ್ತಿ ಕೆತ್ತಲು ಬಳಸಿದ ಕೃಷ್ಣಶಿಲೆಯನ್ನು ಒದಗಿಸಿದ ಕಲ್ಲು ಗಣಿಗಾರಿಕೆ ಗುತ್ತಿಗೆದಾರನಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ದಂಡ ವಿಧಿಸಿತ್ತು ಎಂಬ ವಿಚಾರ ಇದೀಗ ಬೆಳಕಿಗೆ ಬಂದಿದ್ದು, ಸರ್ಕಾರದ ಈ ನಡೆಗೆ ಬಿಜೆಪಿ ತೀವ್ರ ಕಿಡಿಕಾರಿದೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು, ಹಿಂದೂ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ರಾಮಭಕ್ತರ ಮೇಲಿನ ಕೋಪ ಇನ್ನೂ ತಣ್ಣಗಾದಂತಿಲ್ಲ ಎಂದು



ಕಿಡಿಕಾರಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರೇ, ತಾವು ದೇವರ ಮೇಲೆ ನಂಬಿಕೆ ಇಲ್ಲದ ನಾಸ್ತಿಕರು ಅಂತ ಇನ್ನೊಬ್ಬರ ಭಕ್ತಿ, ಶ್ರದ್ಧೆಗಳ ಮೇಲೆ ದ್ವೇಷ ಸಾಧಿಸುವುದು ಯಾವ ನ್ಯಾಯ? ತಮಗೆ ರಾಮಮಂದಿರಕ್ಕೆ ಕಾಣಿಕೆ ಕೊಡುವ ಮನಸ್ಸಿಲ್ಲದಿದ್ದರೆ ಹೋಗಲಿ, ತಮ್ಮ ಕೈಲಾದ ಅಳಿಲು ಸೇವೆ ಮಾಡುತ್ತಿರುವ ಭಕ್ತರಿಗೆ ತೊಂದರೆ ಕೊಡಬೇಡಿ ಎಂದು ಹೇಳಿದ್ದಾರೆ.

ಇದೇ ವೇಳೆ ಕಾಂಗ್ರೆಸ್ ವಿರುದ್ಧವೂ ಕಿಡಿಕಾರಿರುವ ಅವರು, ರಾಮೋತ್ಸವಕ್ಕೆ ಅಡ್ಡಿ, ಕರಸೇವಕರ ಬಂಧನ, ರಾಮನ ಫ್ಲೆಕ್ಸ್ ಹರಿದಿದ್ದು, ರಾಮ ಸೀತೆ ಟೆಂಟ್ ಗೊಂಬೆ, ಜನವರಿ 22ರಂದು ರಜೆ ಕೊಡಲ್ಲ, ರಾಮ ಅವರ ಅಪ್ಪನ ಮನೆ ಆಸ್ತಿನಾ, ಅಯೋಧ್ಯೆಯಲ್ಲಿರುವುದು ಬಿಜೆಪಿ ರಾಮ ಇವ್ಯಾವುದೂ ಕಾಂಗ್ರೆಸ್ ನಾಯಕರಿಂದ ಬಾಯಿ ತಪ್ಪಿ ಬಂದ ಮಾತುಗಳಲ್ಲ. ಮುಸ್ಲಿಮರ ಓಲೈಕೆಗಾಗಿ ಉದ್ದೇಶಪೂರ್ವಕವಾಗಿ ಆಡಿದ ಮಾತುಗಳು. ಈ ರಾಮ ನಿಂದನೆಯ ನಡೆ–ನುಡಿಗಳೆಲ್ಲ ಕಾಂಗ್ರೆಸ್ ಪಕ್ಷದ ಮನದಾಳದಲ್ಲಿರುವ ಹಿಂದೂ ವಿರೋಧ, ರಾಮದ್ವೇಷದ ಪ್ರತಿಬಿಂಬಗಳಾಗಿವೆ ಎಂದು ತಿಳಿಸಿದ್ದಾರೆ.

## ರಾಜ್ಯದಲ್ಲಿ ಮೂರು ವರ್ಷದಲ್ಲಿ 9,860 ಪೋಕ್ಸೋ ಕೇಸ್ ದಾಖಲು

**ಪೋಕ್ಸೋ ಪ್ರಕರಣ:**

2021ರಲ್ಲಿ 2880 ಪ್ರಕರಣಗಳು
2022ರಲ್ಲಿ 3,189 ಪ್ರಕರಣಗಳು
2023ರಲ್ಲಿ 3791 ಪ್ರಕರಣಗಳು
**ಒಟ್ಟು 9860 ಪ್ರಕರಣಗಳು.**

ಬೆಂಗಳೂರು: ಕಳೆದ ಮೂರು ವರ್ಷಗಳಲ್ಲಿ ಒಟ್ಟು 9,860 ಪೋಕ್ಸೋ ಪ್ರಕರಣಗಳು ದಾಖಲಾಗಿವೆ ಎಂದು ಮಕ್ಕಳ ರಕ್ಷಣಾ ಆಯೋಗ ಆಘಾತಕಾರಿ ಮಾಹಿತಿ ನೀಡಿದೆ.

ಬೆಂಗಳೂರು ಒಂದರಲ್ಲಿ 2021ರಲ್ಲಿ 403 ಪ್ರಕರಣಗಳು ದಾಖಲಾಗಿದ್ರೆ, 2022ರಲ್ಲಿ 480 ಹಾಗೂ 2023ರಲ್ಲಿ 571 ಪ್ರಕರಣಗಳು ದಾಖಲಾಗಿವೆ.

ಈ ಮೂಲಕ ಮೂರು ವರ್ಷಗಳ ಅವಧಿಯಲ್ಲಿ ಬೆಂಗಳೂರಲ್ಲಿ ಒಟ್ಟು 1454 ಪ್ರಕರಣಗಳು ದಾಖಲಾಗಿವೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಶಶಿಧರ್ ಕೋಸಂಬೆ, ರಾಜ್ಯದಲ್ಲಿ ಪೋಕ್ಸೋ ಕಾಯ್ದೆ ಅಡಿಯಲ್ಲಿ 9860 ಕೇಸ್ಗಳು ವರದಿಯಾಗಿವೆ. ಈ ಮೂಲಕ ಕಾನೂನಿನ ದೂರದೃಷ್ಟಿ ವಿಫಲವಾಗಿದೆ.

ಯಾಕಂದರೆ ಇಷ್ಟು ಪ್ರಕರಣಗಳಲ್ಲಿ ಕೇವಲ 200 ಕೇಸ್ಗಳಿಗೆ ಮಾತ್ರ ಶಿಕ್ಷೆ ಆಗಿದೆ. 200 ಕೇಸ್ಗಳು ಮಾತ್ರ ಕೋರ್ಟ್ನಲ್ಲಿ ನಡೆಯುತ್ತಿವೆ. ದೂರುದಾರ ರಾಜಿ, ಪೊಲೀಸ್ ಇಲಾಖೆಯ ವೈಫಲ್ಯಗಳಿಂದ ಪ್ರಕರಣಗಳು ಫೇಲ್ಯೂರ್ ಆಗುತ್ತಿವೆ.

ವರದಿ ಬೆನ್ನಲ್ಲೇ ನಮ್ಮ ಆಯೋಗವು ಗಂಭೀರವಾಗಿ ಪರಿಗಣಿಸಿದ್ದು, ಕಾನೂನು ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಶಿಫಾರಸು ಮಾಡುತ್ತಿದ್ದೇವೆ ಎಂದು ಆಗ್ರಹಿಸಿದ್ದಾರೆ.

## ಕೈಗೆ ಕೈಕೊಟ್ಟು ಮತ್ತೆ ಕಮಲದತ್ತ ಮುಖ ಮಾಡಿದ ಶೆಟ್ಟರ





ನವದೆಹಲಿ: ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರು ಮರಳಿ ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ.

ಹೌದು...ದೆಹಲಿಯ ಬಿಜೆಪಿ ಕೇಂದ್ರ ಕಚೇರಿಯಲ್ಲಿ ಮಾಜಿ ಸಿಎಂ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಕೇಂದ್ರ ಸಚಿವರಾದ ರಾಜೀವ್ ಚಂದ್ರಶೇಖರ್, ಭೂಪೇಂದ್ರ ಯಾದವ್ ಸಮಕ್ಷಮದಲ್ಲಿ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಪಕ್ಷ ಸೇರ್ಪಡೆಯಾಗಿದ್ದಾರೆ.

ವಿಧಾನಪರಿಷತ್ತು ಸದಸ್ಯತ್ವಕ್ಕೆ ರಾಜೀನಾಮೆ: ಕರ್ನಾಟಕ ವಿಧಾನಪರಿಷತ್ತು ಸದಸ್ಯತ್ವಕ್ಕೆ ಈ ದಿನ ನಾನು ನನ್ನ ಸ್ವ–ಇಚ್ಛೆಯಿಂದ ರಾಜೀನಾಮೆ ಸಲ್ಲಿಸಿದ್ದೇನೆ. ದಯವಿಟ್ಟು ನನ್ನ ರಾಜೀನಾಮೆಯನ್ನು ಸ್ವೀಕರಿಸಿಬೇಕಾಗಿ ವಿನಂತಿ. ಇಲ್ಲಿಯವರೆಗೆ ತಾವು ನೀಡಿದ ಸಹಕಾರಕ್ಕಾಗಿ ವಂದನೆಗಳು ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರು ಸ್ಪೀಕರ್ ಬಸವರಾಜ ಹೊರಟ್ಟಿ ಅವರಿಗೆ ಬರೆದ ತಮ್ಮ ರಾಜೀನಾಮೆ ಪತ್ರದಲ್ಲಿ ತಿಳಿಸಿದ್ದಾರೆ.

### ಜಗದೀಶ್ ಶೆಟ್ಟರ್ ಗೆ ಒಳ್ಳೆಯದಾಗಲಿ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಯಾರಿಗೆ ಎಲ್ಲಿ ಇರಬೇಕು ಅನಿಸುತ್ತದೆ ಅವರು ಅಲ್ಲಿಗೆ ಹೋಗುತ್ತಾರೆ. ಮಾಜಿ ಸಿಎಂ ಜಗದೀಶ್ ಶೆಟ್ಟರ್ ಗೆ ಬಿಜೆಪಿಯಲ್ಲೇ ಇರಬೇಕೆಂದು ಬಯಸಿದ್ದು, ಅದಕ್ಕೆ ಅವರು ಬಿಜೆಪಿಗೆ ಸೇರಿದ್ದಾರೆ. ಅವರಿಗೆ ಒಳ್ಳೆಯದಾಗಲಿ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದ್ದಾರೆ.

### ಶೆಟ್ಟರ್‌ಗೆ ನಾವು ಅನ್ಯಾಯ, ಅಪಮಾನ ಮಾಡಿಲ್ಲ: ಸಿಎಂ ಸಿದ್ದರಾಮಯ್ಯ



ಮಡಿಕೇರಿ: ಕಾಂಗ್ರೆಸ್ ಪಕ್ಷದಲ್ಲಿ ಜಗದೀಶ್ ಶೆಟ್ಟರಿಗೆ ಯಾವುದೇ ಅನ್ಯಾಯ ಆಗಿಲ್ಲ. ಅವಮಾನವೂ ಆಗಿಲ್ಲ. ಅವರು ಯಾಕೆ ಪಕ್ಷ ಬಿಟ್ಟರೋ ಗೊತ್ತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಮಾಜಿ ಸಿಎಂ ಯಡಿಯೂರಪ್ಪ ಜೊತೆ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಮಾತುಕತೆ ನಡೆಸಿದ್ದು, ಬಿಜೆಪಿಗೆ ವಾಪಸ್ ಬರುವಂತೆ ಜಗದೀಶ್ ಶೆಟ್ಟರ್‌ಗೆ ಯಡಿಯೂರಪ್ಪ ಅವರಿಗೆ ಆಹ್ವಾನ ಕೊಟ್ಟಿದ್ದರು. ವರಿಷ್ಠರನ್ನ ಒಪ್ಪಿಸುತ್ತೇವೆ, ವರಿಷ್ಠರ ಜೊತೆ ಮಾತುಕತೆ ನಡೆಸುತ್ತೇವೆ ಎಂದು ಯಡಿಯೂರಪ್ಪ ಹೇಳಿದ್ದರು.



## ರಾಹುಲ್ ಗಾಂಧಿ ಪರ ಪ್ರತಿಭಟನೆ: ನಲಪಾಡ್ ಸೇರಿ 25 ಮಂದಿ ವಿರುದ್ಧ ಪ್ರಕರಣ ದಾಖಲು

ಬೆಂಗಳೂರು: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪರ ಪ್ರತಿಭಟನೆ ನಡೆಸಿದ್ದ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮೊಹಮ್ಮದ್ ನಲಪಾಡ್ ವಿರುದ್ಧ ಪೊಲೀಸ್ ಎಫ್‌ಐಆರ್ ದಾಖಲಾಗಿದೆ.

ರಾಹುಲ್ ಗಾಂಧಿಯ ಭಾರತ್ ಜೋಡೊ ನ್ಯಾಯ ಯಾತ್ರೆಗೆ ಅಸ್ಸಾಂನಲ್ಲಿ ಅಡ್ಡಿಪಡಿಸಿದ್ದಕ್ಕೆ ರಾಜ್ಯದಲ್ಲಿ ಕಾಂಗ್ರೆಸ್ ಪ್ರತಿಭಟನೆ ನಡೆಸಿತ್ತು. ಬೆಂಗಳೂರಿನಲ್ಲೂ ಸಹ ರಾಹುಲ್ ಗಾಂಧಿ ಪರ ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ನಲಪಾಡ್ ಪಂಜಿನ ಮೆರವಣಿಗೆ ನಡೆಸಿ ಪ್ರತಿಭಟಿಸಿದ್ದರು.

ಈ ವೇಳೆ ಅನುಮತಿ ಇಲ್ಲದೇ ಪ್ರತಿಭಟನೆ ನಡೆಸಿದ್ದಕ್ಕಾಗಿ ನಲಪಾಡ್ ಮತ್ತಿತರರ ವಿರುದ್ಧ ಪ್ರಕರಣ ದಾಖಲಾಗಿದೆ. ಮೆರವಣಿಗೆಯಲ್ಲಿ ಭಾಗಿಯಾಗಿದ್ದ ಕಾಂಗ್ರೆಸ್ ಯುವ ಮುಖಂಡ ಮೊಹಮ್ಮದ್ ನಲಪಾಡ್ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ಅಲ್ಲದೆ, 25 ಮಂದಿಯ ವಿರುದ್ಧವೂ ಎಫ್‌ಐಆರ್ ದಾಖಲಾಗಿದೆ.

## ಮುಖ್ಯಮಂತ್ರಿಗಳು ರೈತರ ಸಾಲಮನ್ನಾ ಮಾಡಿ, ಪರಿಹಾರ ನೀಡಲಿ, ಇಲ್ಲವೇ ರಾಜ್ಯದ ಜನತೆಯಲ್ಲಿ ಕ್ಷಮೆ ಕೇಳಲಿ: ಗೋವಿಂದ ಕಾರಜೋಳ

ಮುಧೋಳ : ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅನ್ನಕ್ಕಾಗಿ ಜನ ಗುಳೆ ಹೋಗುವುದು ಸರ್ಕಾರದ ವೈಫಲ್ಯಕ್ಕೆ ಕಾರಣವಾಗಿದೆ. ಅಲ್ಲದೇ ರೈತರು ನಿರಾಶೆಯಿಂದ ಮನನೊಂದು ಆತ್ಮಹತ್ಯೆ ಮಾಡಿಕೊಳ್ಳುವ ಮುನ್ನ ರೈತರ ಸಾಲಮನ್ನಾ ಮಾಡಿ, ಪರಿಹಾರ ನೀಡಬೇಕು ಇಲ್ಲವೇ ರಾಜ್ಯದ ಜನತೆಯಲ್ಲಿ ಕ್ಷಮೆ ಕೇಳಬೇಕೆಂದು ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಗೆ ಆಗ್ರಹಿಸಿದರು.

ಅವರು ತಮ್ಮ ಗೃಹ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ರಾಜ್ಯದ ಮತದಾರರಿಗೆ ಸುಳ್ಳು ಭರವಸೆ ನೀಡಿ, ಮೋಸ ಮಾಡಿ ಮತ ಪಡೆದು ಕಾಂಗ್ರೆಸ್ ಅಧಿಕಾರಕ್ಕೆ ಬಂದು ಎಂಟು ತಿಂಗಳುಗಳಾಗಿವೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದನಂತರ ರಾಜ್ಯದಲ್ಲಿ ಬರಗಾಲ ಆರಂಭವಾಗಿದೆ. ಸಮರ್ಪಕ ಮಳೆಯಾಗದೇ ಬರಗಾಲದಿಂದ ರಾಜ್ಯದ ರೈತರು ತತ್ತರಿಸಿ, ಕಷ್ಟ ಅನುಭವಿಸುತ್ತಿದ್ದಾರೆ. ಇಲ್ಲಿಯವರೆಗೂ ರೈತರಿಗೆ ಸೂಕ್ತ ಪರಿಹಾರ ನೀಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ. ಮೇವು ಬ್ಯಾಂಕ್, ಹೊಸ ಕಾಮಗಾರಿಗಳಂತೂ ಆರಂಭವಾಗಿಲ್ಲವೆಂದು ಅವರು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕೆಂಡಕಾರಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿನ ಕಾಮಗಾರಿಗಳನ್ನೇ ಮತ್ತೊಮ್ಮೆ ಉದ್ಘಾಟಿಸುವುದು, ಅಡಿಗಲ್ಲು ಇಡುವಂತಹ ಕಾರ್ಯಕ್ರಮ ನಡೆಸುವ ನಾಚಿಕೆಗೇಡು



ಸರ್ಕಾರ ಇದಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿ, ಬರಗಾಲ ಪರಿಹಾರ ಶೀಘ್ರವಾಗಿ ನೀಡಬೇಕು, ಜನ–ಜಾನುವಾರಗಳಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಅವಶ್ಯವಿದ್ದಲ್ಲಿ ಮೇವು ಬ್ಯಾಂಕ್ ಮತ್ತು ಗೋಶಾಲೆ ತೆರೆಯಬೇಕು. ಸರ್ಕಾರಿ ಕಾಮಗಾರಿಗಳನ್ನು ಶೀಘ್ರದಲ್ಲಿ ಆರಂಭಿಸಿ, ಜನತೆಗೆ ಉದ್ಯೋಗ ನೀಡಬೇಕು. ಅನ್ನಕ್ಕಾಗಿ ಜನ ಗುಳೆ ಹೋಗದಂತೆ ಸರ್ಕಾರ ನೋಡಿಕೊಳ್ಳಬೇಕು, ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕು. ಅಂದಾಗ ಮಾತ್ರ ಇದು ನುಡಿದಂತೆ ನಡೆದ ಸರ್ಕಾರವಾಗುತ್ತದೆ. ಇಲ್ಲದಿದ್ದರೆ ವಚನ ಭ್ರಷ್ಟ ಸರ್ಕಾರವಾಗುತ್ತದೆ ಎಂದು ಗೋವಿಂದ ಕಾರಜೋಳ ಅವರು ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದರು.

ಕಾಂಗ್ರೆಸ್ಸಿನಲ್ಲಿ ಸ್ಕ್ರ್ಯಾಪ್ ಆಗಿರುವ ವೀರಪ್ಪ ಮೋಯ್ಲಿ : ಕಾಂಗ್ರೆಸ್ ಪಕ್ಷದಲ್ಲೀಗ ಸ್ಕ್ರ್ಯಾಪ್ ಆಗಿ ಸಮಚಿತ್ರ ಕಳೆದುಕೊಂಡಿರುವ ವೀರಪ್ಪ ಮೋಯ್ಲಿ ಅಯೋಧ್ಯೆಯಲ್ಲಿ ಶ್ರೀ ಬಾಲರಾಮನ ಪ್ರಾಣ ಪ್ರತಿಷ್ಠಾಪನೆ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಜನಮನದಲ್ಲಿ ಸೌಹಾರ್ದತೆ ಮತ್ತು ಸಮಭಾವ ಮೂಡಿಸಿದ ದೇಶದ ಜನಪ್ರಿಯ ನಾಯಕರಾಗಿರುವ ಪ್ರಧಾನಿ ನರೇಂದ್ರ ಮೋದಿಯವರಂತಹ ಮಹಾನ್ ನಾಯಕನನ್ನು ರಾಜಕಾರಣಕ್ಕಾಗಿ ಕುಚೋದ್ಯ ಮಾಡುವುದು ಸರಿಯಲ್ಲ. ಕರ್ನಾಟಕದ ಹಿರಿಯ ರಾಜಕಾರಣಿಗಳಲ್ಲೊಬ್ಬರಾದ ಮಾಜಿ ಸಿಎಂ ವೀರಪ್ಪ ಮೋಯ್ಲಿ ಶ್ರೇಷ್ಠ ಸಾಹಿತಿಗಳು ಕೂಡಾ ಹೌದು. ಅವರು 600 ಪುಟಗಳ ಶ್ರೀ ರಾಮಾಯಣ ಮಹಾನ್ವೇಶಣ ಬರೆದ ಖ್ಯಾತ ಬರಹಗಾರರು. ಇಂತಹ ವ್ಯಕ್ತಿ ರಾಜಕೀಯವಾಗಿ ಮೇಲೆ ಬರಲು ಕೀಳುಮಟ್ಟದ ಭಾವನೆ ಪ್ರದರ್ಶಿಸಿರುವುದು ನಾಡಿನ ದುರಂತ. ಸಮಭಾವ, ಸಮಭಂಗಿ ಎಲ್ಲರಲ್ಲೂ ಇರಲಿ ಎಂದು ಆಶಿಸುವೆ. ಮೋಯ್ಲಿಯವರು ತಮ್ಮ ನಾಯಕರ ಮನವೊಲಿಸಲು ಮೋದಿಯವರ ವೈಯಕ್ತಿಕ ನಡೆ–ನುಡಿಯಲ್ಲಿ ಹುಳುಕು ಹುಡುಕುವ ಮಟ್ಟಕ್ಕೆ ಇಳಿಯಬಾರದಿತ್ತು. ಮೊಸರಲ್ಲಿ ಕಲ್ಲು ಹುಡುಕುವ ಚಿಂತನೆಯನ್ನು ಮೋಯ್ಲಿಯಂತ ವಯೋವೃದ್ಧ ರಾಜಕಾರಣಿಯಲಲಿ ಕಂಡು ನಮ್ಮೆಲ್ಲರಿಗೂ ವ್ಯಸನವಾಗಿದೆ ಎಂದು ತಾವು ಟ್ವೀಟ್ ಮಾಡಿರುವುದಾಗಿ ಗೋವಿಂದ ಕಾರಜೋಳ ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಕೆ.ಆರ್.ಮಾಚಪ್ಪನವರ, ಹನಮಂತ ತುಳಸಿಗೇರಿ, ಸೋನಾಪ್ಪಿ ಕುಲಕರ್ಣಿ, ವೆಂಕಣ್ಣ ಕಾತರಕಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮದರಸಾಗಳಿಗೆ ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣಕ್ಕೆ ಅರ್ಜಿ ಆಹ್ವಾನ

ಬೆಳಗಾವಿ: 2023-24ರ ಸಾಲಿನಲ್ಲಿ ಜಿಲ್ಲೆಯಲ್ಲಿರುವ ನೋಂದಾಯಿತಿ ಮದರಸಾಗಳಿಗೆ ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣವನ್ನು ನೀಡಲು ಮದರಸಾ ಸಂಸ್ಥೆಯಿಂದ ಅರ್ಜಿಯನ್ನು ಸಲ್ಲಿಸಲು ಜ.20 ರಂದು ಕೊನೆಯ ದಿನಾಂಕ ನಿಗದಿಪಡಿಸಿತ್ತು ಆದರೆ ಅರ್ಜಿ ಸಲ್ಲಿಸುವ ಕೊನೆ ದಿನಾಂಕವನ್ನು ಜ.31ರ ವರೆಗೆ ಮುಂದುಡಲಾಗಿದೆ.

ಆಸಕ್ತರು ವೇಬ್ https://dom.karnataka.gov.in ಲಿಂಕ್ ಮೂಲಕ ಅರ್ಜಿ ಸಲ್ಲಿಸಿ, ಸೂಕ್ತ ದಾಖಲೆಗಳೊಂದಿಗೆ ಅರ್ಜಿಯನ್ನು ಜಿಲ್ಲೆಯ ರಾಮತೀರ್ಥ ನಗರದ ಕೆ.ಎಸ್.ಸಿ.ಎ ಕ್ರಿಕೇಟ್ ಕೇಡಾಂಗಣ ಎದುರುಗಡೆಯ ಮೌಲಾನಾ ಆಜಾದ್ ಅಲ್ಪಸಂಖ್ಯಾತರ ಭವನ, ಅಲ್ಪಸಖ್ಯಾತರ ಕಲ್ಯಾಣ ಇಲಾಖೆಗೆ ಸಲ್ಲಿಸಬೇಕೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆದರ್ಶ ವಿದ್ಯಾಲಯ; 6 ನೇ ತರಗತಿ ಪ್ರವೇಶ ಪರಿಕ್ಷೆಗಳ ನೊಂದಣಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024-25 ರ ಸಾಲಿನಲ್ಲಿ ಜಿಲ್ಲೆಯ ಆದರ್ಶ ವಿದ್ಯಾಲಯಗಳ 6 ನೇ ತರಗತಿ ವಿದ್ಯಾರ್ಥಿಗಳ ಪ್ರವೇಶ ಪರೀಕ್ಷೆ ನೊಂದಣಿ ಪ್ರಕ್ರಿಯೆ ಜ. 17 ರಿಂದ ಫೆ 6 ರವರೆಗೆ ಆನ್ ಲೈನ್ ಮೂಲಕ ಅರ್ಜಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ 9449624312 ಅಥವಾ 9880515528 ಸಂಖ್ಯೆಗೆ ಸಂಪರ್ಕಿಸಬುದು ಎಂದು ಮಣ್ಣೂರಿನ ಜಿಲ್ಲಾ ಶಿಕ್ಷಣ ಮತ್ತು ತರಬೆತಿ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗಳ ಲಿಖಿತ ಪರೀಕ್ಷೆ

ಬೆಳಗಾವಿ: ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಜ.28 ರಂದು ಬೆಳಗ್ಗೆ 11 ಗಂಟೆಯಿಂದ 12.30ರವರೆಗೆ ಬೆಳಗಾವಿ ನಗರದ ಒಟ್ಟು 40 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತವೆ.

ಸದರಿ ಪರೀಕ್ಷಗಳ ಕಾಲಕ್ಕೆ ದಂಡ ಪ್ರಕ್ರೀಯೆ ಸಂಹಿತೆಯ ಕಲಂ 144 ಸಿಆರ್‌ಪಿಸಿ ಅಡಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ ವ್ಯಾಪ್ತಿಯಲ್ಲಿ ಪರೀಕ್ಷೆ ನಡೆಯವ ಸಮಯದಲ್ಲಿ ನಿಷೇದಾಜ್ಞಾ ಆದೇಶ ಹೊರಡಿಸಲಾಗಿದೆ. ಪರೀಕ್ಷೆ ನಡಿಯುವ ಮುಂಚೆ 10 ಗಂಟೆಯಿಂದ 1 ಗಂಟೆಯವರೆಗೆ ಪರೀಕ್ಷಾ ಕೇಂದ್ರದ ಆವರಣದಲ್ಲಿ ಬಿಗಿಬಂದೋಬಸ್ತ್ ಮಾಡಲಾಗಿದೆ.

ಪರೀಕ್ಷೆ ಕೇಂದ್ರಗಳ ಸುತ್ತಲೂ 5ಕಿಂತ ಹೆಚ್ಚು ಜನರ ಗುಂಪು ಸೇರುವುದ್ದನ್ನು ನೀಷೇದಿಸಲಾಗಿದೆ. ಕೇಂದ್ರಗಳ ಸುತ್ತಮುತ್ತ ಯಾವುದೆ ಸಭೆ ಸಮಾರಂಭ ನಡೆಯದಂತೆ ನಿಷೇಧಾಜ್ಞೆ ವಿಧಿಸಲಾಗಿದೆ ಪರೀಕ್ಷೆ ಕೇಂದ್ರಗಳ ಸುತ್ತಲೂ ಶಸ್ತ್ರ, ಬಡಿಗೆ,ಬರ್ಚಿ,ಖಡ್ಗ, ಗಧೆ,ಬಂದೂಕು ಅಥವಾ ದೇಹಕ್ಕೆ ಅಪಾಯ ಉಂಟುಮಾಡುವ ಮಾರಕ ಅಸ್ತ್ರ ತಗೆದುಕೊಂಡು ತೀರಗಾಡುವುದನ್ನು ನಿಷೇದಿಸಲಾಗಿದೆ.

ಸದರಿ ಆಜ್ಞೆಯನ್ನು ಉಲ್ಲಂಘಿಸುವವರ ವಿರುದ್ದ ಕಲಂ 188 ಭಾರತೀಯ ದಂಡ ಸಂಹಿತೆಯ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು ಎಂದು ಜಿಲ್ಲೆಯ ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿ ಮತ್ತು ಪೊಲೀಸ್ ಆಯುಕ್ತರಾದ ಎಸ್. ಎನ್. ಸಿದ್ದರಾಮಪ್ಪಾ ಆದೇಶದಲ್ಲಿ ತಿಳಿಸಿದ್ದಾರೆ.

## ವಿಶೇಷಚೇತನರಿಗೆ ಅಂಗವಿಕಲ ರಿಯಾಯಿತಿ ಬಸ್ ಪಾಸ್‌ಗಳ ನವೀಕರಣ

ಬೆಳಗಾವಿ: 2023ರ ಸಾಲಿನ ವಿಕಲಚೇತನರ ರಿಯಾಯಿತಿ ಬಸ್ ಪಾಸ್‌ಗಳ ನವೀಕರವು ಜ.01 ರಿಂದ ಫೆ.29 ರವರೆಗೆ ಆವಕಾಶವಿದೆ. ಚಾಲ್ತಿ ಪಾಸ್ ಹೊಂದಿರುವ ಅರ್ಹ ವಿಕಲಚೇತನರು ಚಿಕ್ಕೋಡಿ, ಸಂಕೇಶ್ವರ, ಗೋಕಾಕ, ನಿಪ್ಪಾಣಿ, ರಾಯಬಾಗ, ಅಥಣಿ, ಹಾಗೂ ಹುಕ್ಕೇರಿ ಪಾಸ್ ಕೌಂಟರ್‌ಗಳಲ್ಲಿ ನವೀಕರಣ ಮಾಡಲಾಗುತ್ತದೆ.

ಫಲಾನುಭವಿಗಳು ಪಾಸ್‌ಗಳ ನವೀಕರಣ ಮತ್ತು ನೂತನ ಪಾಸ್‌ಗಳಿಗೆ ರೂ. 660 ನಗದು ರೂಪದಲ್ಲಿ ಅಥವಾ ಡಿಡಿ ಮೂಲಕ ಶುಲ್ಕವನ್ನು ಪಾವತಿಸಿ ವಿಕಲಚೇತನರ ಬಸ್ ಪಾಸ್ ನವೀಕರಿಸಿ ಕೋಳ್ಳಬಹುದ್ದಾಗಿದೆ. ವಿತರಿಸುವ ಬಸ್ ಪಾಸ್‌ಗಳು ಸರದಿ ಅವಧಿಯ ಒಳಗಾಗಿ ಎಲ್ಲಾ ಫಲಾನುಭವಿಗಳು ಪಾಸುಗಳನ್ನು ನವೀಕರಿಸಿಕೊಳ್ಳುವ ಅವಕಾಶವಿದೆ. ಅವಧಿ ಮೀರಿ ಬಂದ ಪಾಸ್‌ಗಳನ್ನು ನವಿಕರಿಸಲಾಗುವುದ್ದಿಲ್ಲ.

ಸರ್ಕಾರದ ಆದೇಶದಂತೆ ಸೇವಾ ಸಿಂಧುವಿನಲ್ಲಿ ಅರ್ಜಿ ಸಲ್ಲಿಸಿದ ವಿಕಲಚೇತನರಿಗೆ ಮಾತ್ರ ರಿಯಾಯಿತಿ ಬಸ್‌ಪಾಸ್‌ಗಳನ್ನು ನೀಡಲಾಗುವುದು ಅರ್ಜಿಗಳನ್ನು ವೇಬ್‌ಸೈಟ್ **https://sevasindhu.karnataka.gov.in** ನಲ್ಲಿ ಸಮೂದಿಸಬೇಕು. ವಿಕಲಚೇತನ ರಿಯಾಯಿತಿ ಬಸ್ ಪಾಸ್ ಪಟೆಯಲು ದೂರವಾಣಿಯುಳ್ಳ ಆಧಾರ ಕಾರ್ಡ ಕಡ್ಡಾಯವಾಗಿದೆ.

**ರಿಯಾಯಿತಿ ಬಸ್ ಪಾಸ್‌ಗಳ ಅರ್ಹತೆ;**

ಹೊಸದಾಗಿ ಪಾಸುಗಳನ್ನು ಜ.15 ರಿಂದ ವಿತರಿಸಲಾಗುತ್ತಿದೆ. ವೈದ್ಯಕೀಯ ಪ್ರಮಾಣ ಪತ್ರ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಂದ ದೃಢಿಕರಿಸಿದ ಚೀಟಿ, ಯು.ಡಿ.ಆಯ್.ಡಿ ಕಾರ್ಡ ನಕಲು ಪ್ರತಿ, ಆಧಾರ ಕಾರ್ಡ, ರೂ.20 ಛಾಯಾ ಕಾಗದ ಮೇಲೆ ಸರಕಾರಿ ನೌಕರಿ/ ಅರೇ ನೌಕರಿ ಮಾಡುವಂತಿಲ್ಲ. ಮೂರು ಇತ್ತಿಚಿನ ಭಾವಚಿತ್ರಗಳು ಸೇರಿದಂತೆ ಅಗತ್ಯ ದಾಖಲಾತಿಗಳನ್ನು ಸೇವಾ ಸಿಂಧುವಿನಲ್ಲಿ ಅರ್ಜಿ ಸಲ್ಲಿಸಿ ಪಾಸ್ ಕೌಂಟರ್‌ಗಳಿಗೆ ನೀಡಬೇಕು. ಹೊಸದಾಗಿ ಪಾಸ್ ಪಡೆದುಕೊಳ್ಳಲು ಯಾವುದೇ ಕಾಲಮಿತಿ ಇರುವುದ್ದಿಲ್ಲ. ವಿಕಲಚೇತನರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಾಕರಸಾಸಂಸ್ಥೆ ಚಿಕ್ಕೋಡಿ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## "ಪರೀಕ್ಷಣ ಮತ್ತು ಮೌಲ್ಯ ನಿರ್ಧಾರಣೆ ಹಾಗೂ ಪ್ರಶ್ನಾಂಶ ಬರವಣಿಗೆ ಅಭ್ಯಾಸ" ಕುರಿತು ಕಾರ್ಯಾಗಾರ

ಬೆಳಗಾವಿ: ರಾಷ್ಟ್ರೀಯ ಪರೀಕ್ಷಣ ಸೇವೆ, ಮೈಸೂರಿನ ಭಾರತೀಯ ಭಾಷಾ ಸಂಸ್ಥಾನ ಹಾಗೂ ಸರಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ ಇವರ ಸಹಯೋಗದಲ್ಲಿ ಶೈಕ್ಷಣಿಕ ಜಿಲ್ಲೆಯ ಉರ್ದು ಶಿಕ್ಷಕರುಗಳಿಗೆ ಉರ್ದು ಭಾಷೆಯಲ್ಲಿ "ಪರೀಕ್ಷಣ ಮತ್ತು ಮೌಲ್ಯ ನಿರ್ಧಾರಣೆ ಹಾಗೂ ಪ್ರಶ್ನಾಂಶ ಬರವಣಿಗೆ ಅಭ್ಯಾಸ" ಕುರಿತು ನಗರದ ಆಲೂರು ವೆಂಕಟರಾವ ಭಾಷಾ ಕೌಶಲ್ಯ ತರಬೇತಿ ಕೇಂದ್ರದಲ್ಲಿ ಜ.22 ರಿಂದ ಜ.24ರ ವರೆಗೆ ಮೂರು ದಿನಗಳ ಮುಖಾ-ಮುಖಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರದ ಸಿ ಟಿ ಇ ಪ್ರಾಚಾರ್ಯರು/ ಸಹನಿರ್ದೇಶಕರಾದ ಎಮ್ ಎಮ್ ಸಿಂಧೂರ ಇವರು ವಹಿಸಿ ಭಾಷಾ ಶಿಕ್ಷಕರಿಗೆ ಅಗತ್ಯವಾದ ಈ ತರಬೇತಿಯ ಸದುಪಯೋಗ ಮಾಡಿಕೊಳ್ಳಲು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಸಂಸ್ಥೆಯ **Dr. M.d. Saleem Ahmedk. Abdul Halim, Dr. Taiyab Ali Khan,** ತರಬೇತಿ ಕಾರ್ಯಕ್ರಮದಲ್ಲಿ ಬೆಳಗಾವಿ ಶೈಕ್ಷಣಿಕ ಜಿಲ್ಲೆಯ ಐವತ್ತು ಜನ ಉರ್ದು ಶಿಕ್ಷಕರು ಹಾಗೂ ತರಬೇತಿ ನೋಡಲ್ ಅಧಿಕಾರಿ ಎಸ್ ಎಸ್ ಹಿರೇಮಠ ಉಪನ್ಯಾಸಕರು ಹಾಜರಿದ್ದರು. ಪ್ರವಾಚಕರಾದ ಬಿ ಎಸ್ ಮಾಯಾಚಾರಿ ನಿರೂಪಣೆ ಮಾಡಿದ್ದರು.

# ಸ್ವಾವಲಂಬಿ, ಸ್ವಾಭಿಮಾನಿಯಾಗಲು ಸ್ತ್ರೀ ಪರವಿದೆ ಕಾಂಗ್ರೆಸ್: ಸಚಿವೆ ಲಕ್ಷ್ಮಿ ಹೆಬ್ಬಾಳಕರ್

ಬೆಳಗಾವಿ: ರಾಷ್ಟ್ರೀಯ ಹೆಣ್ಣು ಮಗು ದಿನವಾಗಿದೆ. ಎಲ್ಲ ಹೆಣ್ಣು ಮಕ್ಕಳಿಗೆ ಶುಭಾಶಯಗಳು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

ಈ ಬಗ್ಗೆ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು, "ನನ್ನ ದೃಷ್ಟಿಯಲ್ಲಿ ಹೆಣ್ಣು ಕೇವಲ ಮಾನುಷಿಯಲ್ಲ, ಅಬಲೆಯೂ ಅಲ್ಲ. ಅವಳೊಂದು ಮಹಾಶಕ್ತಿ"

ಇದು ರಾಷ್ಟ್ರಕವಿ ಕುವೆಂಪು ಅವರು ಹೇಳಿರುವ ಸಾಲುಗಳು. ಮಹಿಳೆಯರ ಶಕ್ತಿಯನ್ನು ಜಾಗೃತಗೊಳಿಸಿ, ಪ್ರೇರಣೆ ನೀಡುವ ಕಾರ್ಯವನ್ನು ನಮ್ಮಸರ್ಕಾರ ಕೈಗೊಂಡಿದೆ.

ಒಂದು ಸಮಾಜ ಸದೃಢವಾಗಬೇಕಾದರೆ ಮೊದಲು ಹೆಣ್ಣು ಸ್ವಾವಲಂಬಿಯಾಗಬೇಕು. ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂಬ ನಾಣ್ಣುಡಿಯಂತೆ ಎಲ್ಲದಕ್ಕೂ ಸ್ತ್ರೀ ಬಹಳ ಮುಖ್ಯ. ಕಾಂಗ್ರೆಸ್ ಸರ್ಕಾರ ಹೆಣ್ಣು ಮಕ್ಕಳ ಅಭ್ಯುದಯಕ್ಕೆ ಸಾಕಷ್ಟು ಶ್ರಮಿಸುತ್ತಿದ್ದು, ಗ್ಯಾರಂಟಿ ಯೋಜನೆಗಳ ಮೂಲಕ ಮಹಿಳೆಯರ ಸಶಕ್ತೀಕರಣಕ್ಕೆ ಮುಂದಾಗಿದೆ.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವಾಲಯವು 2008 ರಿಂದ ಪ್ರತಿ ಜ.24 ರಂದು ರಾಷ್ಟ್ರೀಯ ಹೆಣ್ಣು ಮಗು ದಿನ ಆಚರಿಸುತ್ತಿದೆ. ಹೆಣ್ಣು ಮಕ್ಕಳ ರಕ್ಷಣೆ, ಅವರ ಹಕ್ಕುಗಳ ಬಗ್ಗೆ ಈ ದಿನದಂದು ಜಾಗೃತಿ ಮೂಡಿಸಲಾಗುತ್ತದೆ.

"ಉಜ್ವಲವಾದ ನಾಳೆಗಾಗಿ ಹೆಣ್ಣು ಮಕ್ಕಳನ್ನು ಸಬಲೀಕರಣಗೊಳಿಸುವುದು" ಎಂಬುದು ಈ ವರ್ಷದ ರಾಷ್ಟ್ರೀಯ ಹೆಣ್ಣು ಮಗು ದಿನದ ಘೋಷ ವಾಕ್ಯವಾಗಿದೆ.

ಶಿಕ್ಷಣ, ಆರೋಗ್ಯ, ಪೌಷ್ಟಿಕತೆಗೆ ನಮ್ಮ ಕಾಂಗ್ರೆಸ್ ಸರ್ಕಾರ ಉತ್ತೇಜನ ನೀಡುವ ಮೂಲಕ ಹೆಣ್ಣು ಮಕ್ಕಳ ಸಬಲೀಕರಣಕ್ಕೆ ಹಲವು ಕಾರ್ಯಕ್ರಮವಳನ್ನು ಈಗಾಗಲೇ ಕೈಗೊಂಡಿದೆ ಎಂಬುದು ಗಮನಾರ್ಹ.

ಅಂಗನವಾಡಿಗಳ ಮೂಲಕ ಪೌಷ್ಠಿಕ ಆಹಾರ ನೀಡುತ್ತಿದೆ. ಹೈಸ್ಕೂಲ್, ಕಾಲೇಜ್, ಅಂಗನವಾಡಿಗಳಲ್ಲಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಸೌಲಭ್ಯ ಕಲ್ಪಿಸಲಾಗುತ್ತಿದೆ. ಮಾತ್ರವಲ್ಲ ನಮ್ಮ ಮೊದಲ ಗ್ಯಾರಂಟಿ ಯೋಜನೆಯಾದ ಶಕ್ತಿ ಅಡಿ ಇದುವರೆಗೆ ಹೆಣ್ಣು ಮಕ್ಕಳು 139.36 ಕೋಟಿ ಮಂದಿಯಷ್ಟು ಪ್ರಯಾಣ ಮಾಡಿದ್ದಾರೆ. ಇದುವರೆಗೆ 3327.27 ಕೋಟಿ ರೂ. ಮೌಲ್ಯದ ಶೂನ್ಯ ಟಿಕೆಟ್ ನೀಡಲಾಗಿದೆ. ಇದರಿಂದ ಅದೆಷ್ಟೋ ಹೆಣ್ಣು ಮಕ್ಕಳಿಗೆ ಅನುಕೂಲವಾಗಿದೆ. ಸಣ್ಣ ಸಣ್ಣ ಉದ್ಯೋಗ, ಉದ್ದಿಮೆಗಳನ್ನು ಮಾಡುತ್ತಿರುವ ತಮ್ಮ ಕಾಲ



ಮೇಲೆ ತಾವು ನಿಂತುಕೊಂಡಿರುವ ಹೆಣ್ಣು ಮಕ್ಕಳಿಗೆ ಈ ಯೋಜನೆ ಭಾರಿ ಶಕ್ತಿಯನ್ನೇ ನೀಡಿದೆ. ಇದಲ್ಲದೆ, ಮನೆಯಲ್ಲಿಯೇ ಕಾಲ ಕಳೆಯುವಂತಾಗಿದ್ದ ಅದೆಷ್ಟೋ ಗೃಹಣಿಯರು ಇಂದು ಖುಷಿ ಖುಷಿಯಲ್ಲಿ ಪ್ರವಾಸಿ ತಾಣಗಳಿಗೆ, ಧಾರ್ಮಿಕ ಕ್ಷೇತ್ರಗಳಿಗೆ ಉಚಿತವಾಗಿ ಪ್ರಯಾಣ ಮಾಡುತ್ತಿದ್ದಾರೆ. ಹೆಣ್ಣೊಬ್ಬಳು ಸ್ವತಂತ್ರವಾಗಿ ಸಂಚಾರ ಮಾಡುವಂತೆ ಮಾಡಿರುವುದು ಹೆಮ್ಮೆಯ ಸಂಗತಿಯಲ್ಲವೇ ಎಂದು ಹೇಳಿದ್ದಾರೆ.

**ಗೃಹಲಕ್ಷ್ಮಿ ಯೋಜನೆಯಿಂದ ಮಹಿಳೆಗೆ ಆರ್ಥಿಕ ಬಲ:**

ಈ ಹಿಂದೆ ಸ್ತ್ರೀ ಶಕ್ತಿ ಸಂಘಗಳ ಮೂಲಕ ಲಕ್ಷಾಂತರ ಮಹಿಳೆಯರು ತಮ್ಮ ಸ್ವಾವಲಂಬಿ ಬದುಕನ್ನು ಕಟ್ಟಿಕೊಂಡಿದ್ದರು. ಆರ್ಥಿಕವಾಗಿ ಸದೃಢವಾಗಿದ್ದರು. ಈಗ ಅದೇ ಮಾದರಿಯಲ್ಲಿ ಆರ್ಥಿಕವಾಗಿ ಸಬಲಗೊಳ್ಳಲು ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೆ ತರಲಾಗಿದೆ. ಗೃಹ ಲಕ್ಷ್ಮಿ ಯೋಜನೆಯಡಿ ಪ್ರತಿ ತಿಂಗಳು 1 ಕೋಟಿ 21 ಲಕ್ಷ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ಮಾಸಿಕ ತಲಾ 2 ಸಾವಿರ ರೂ. ಜಮಾ ಮಾಡಲಾಗುತ್ತಿದೆ. ಅಂದರೆ ಮಾಸಿಕವಾಗಿ 2300 ಕೋಟಿ ರೂಪಾಯಿಯನ್ನು ನಮ್ಮ ಕಾಂಗ್ರೆಸ್ ಸರ್ಕಾರ ತೆಗೆದಿರಿಸಿದೆ. ಈ ಮೊತ್ತ ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಯನ್ನಾಗಿ ಮಾಡಿದೆ. ಇದರಿಂದ ಎಷ್ಟೋ ಮಂದಿಗೆ ಆರ್ಥಿಕವಾಗಿ ಸಹಾಯವಾಗಿದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು.

**ಮಹಿಳೆಗೆ ಅನುಕಂಪ ಬೇಡ, ಪ್ರೋತ್ಸಾಹ ಬೇಕು**

ಮಹಿಳೆ ಇಂದು ವಿಜ್ಞಾನ, ಬಾಹ್ಯಾಕಾಶ, ಎಂಜಿನಿಯರಿಂಗ್, ಸಂಶೋಧನೆ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ತನ್ನ ಛಾಪನ್ನು ಮೂಡಿಸುತ್ತಾ ಬಂದಿದ್ದಾಳೆ. ಹೆಣ್ಣು ಮಗಳಿಗೆ ಅನುಕಂಪ ಬೇಕಿಲ್ಲ. ಆಕೆಗೆ ಸಮರ್ಪಕವಾದ ಶಿಕ್ಷಣ ಕೊಡಬೇಕು, ಪ್ರೋತ್ಸಾಹ ಸಿಗಬೇಕು, ರಕ್ಷಣೆ ಕೊಡುವ ಕೆಲಸ ನಮ್ಮ-ನಿಮ್ಮೆಲ್ಲರದ್ದಾಗಿರಬೇಕು. ಆಕೆಯನ್ನು ಪೂಜ್ಯನೀಯ ಸ್ಥಾನದಲ್ಲಿ ನೋಡುವ ನಮ್ಮ ಸಮಾಜವು ಏಳ್ಗೆ ವಿಷಯ ಬಂದಾಗ ಮರೆತುಬಿಡುತ್ತೇವೆ. ಇನ್ನು ಆ ರೀತಿಯಾಗಬಾರದು. ಸ್ತ್ರೀ ತನ್ನ ಕಾಲ ಮೇಲೆ ತಾನು ನಿಲ್ಲಬೇಕು ಎಂಬ ನಿಟ್ಟಿನಲ್ಲಿ ಕಾಂಗ್ರೆಸ್ ಕಾರ್ಯನಿರ್ವಹಣೆ ಮಾಡುತ್ತಿದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದರು.

ಹೆಣ್ಣು ಭ್ರೂಣ ಹತ್ಯೆ ಮಹಾ ಪಾಪ. ಈ ಬಗ್ಗೆ ಸಂಘ ಸಂಸ್ಥೆಗಳು, ಪ್ರಜ್ಞಾವಂತರು ಗ್ರಾಮೀಣ ಭಾಗದಲ್ಲಿ ಜಾಗೃತಿ ಮೂಡಿಸಬೇಕು. ಜಾಲತಾಣಗಲ್ಲಿ ತಜ್ಞರು ಈ ಬಗ್ಗೆ ತಿಳಿವಳಿಕೆ ಹೇಳಬೇಕು. ಮಹಿಳೆಯರು, ಯುವತಿಯರು ಈ ಬಗ್ಗೆ ಜಾಗೃತರಾಗಬೇಕು ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

**ಕಾಂಗ್ರೆಸ್ ಮಹಿಳಾಪರ ಪಕ್ಷ**

ಕಾಂಗ್ರೆಸ್ ಯಾವತ್ತೂ ಸಹ ಸ್ತ್ರೀ ಪರವಾಗಿದೆ. ಆಕೆ ಆರ್ಥಿಕವಾಗಿ ಸದೃಢವಾಗಿರಬೇಕು ಎಂಬ ಆಶಯವನ್ನು ಹೊಂದಿದೆ. ಈ ನಿಟ್ಟಿನಲ್ಲಿ ಶ್ರೀಮತಿ ಇಂದಿರಾ ಗಾಂಧಿ ಅವರ ಕಾಲದಿಂದ ಹಿಡಿದು ಪ್ರಸ್ತುತ ಕಾಲಘಟ್ಟದಲ್ಲಿಯೂ ಇದೇ ಮಾದರಿಯಲ್ಲಿ ನಮ್ಮ ಪಕ್ಷ ಕಾರ್ಯನಿರ್ವಹಿಸುತ್ತಿದೆ. ಹೆಣ್ಣು ಮಕ್ಕಳಿಗೆ ರಾಜಕೀಯವಾಗಿಯೂ ಸಾಕಷ್ಟು ಅವಕಾಶವನ್ನು ಕೊಟ್ಟಿದೆ. ಇಂಥ ಒಂದು ಪಕ್ಷದಲ್ಲಿ ನಾನು ಸೇವೆ ಸಲ್ಲಿಸುತ್ತಿರುವುದಕ್ಕೆ ನಿಜಕ್ಕೂ ಹೆಮ್ಮೆ ಎನ್ನಿಸುತ್ತಿದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ.

## ಮುಂದಿನ ಪೀಳಿಗೆಯಲ್ಲಿ ದೇಶಾಭಿಮಾನ ಮೂಡಲಿ: ಡಾ.ಅಲ್ಲಮಪ್ರಭು




ಬೆಳಗಾವಿ: "ಭಾರತೀಯ ಸಂಸ್ಕೃತಿ ಹಾಗೂ ಸಂಸ್ಕಾರ ವಿಶ್ವದಲ್ಲೇ ವಿಶಿಷ್ಟವಾದುದು, ಈ ಹಿನ್ನಲೆಯಲ್ಲಿ ಭಾರತಕ್ಕೆ ತನ್ನದೇ ಆದ ಮಹತ್ವವಿದೆ. ನಮ್ಮ ಹಿರಿಯರ ತ್ಯಾಗ ಬಲಿದಾನಗಳ ಫಲವಾಗಿ ಬಂದ ಈ ಸ್ವಾತಂತ್ರ್ಯ ಅಮೂಲ್ಯವಾದದ್ದು ಮುಂದಿನ ಪೀಳಿಗೆಗೆ ಇದರ ಅರಿವು ಮೂಡಿಸಿ ದೇಶಭಿಮಾನ ಮೂಡಿಸುವ ಕಾರ್ಯವನ್ನು ಶಿಕ್ಷಣ ಸಂಸ್ಥೆಗಳು ಮಾಡಬೇಕು ಈ ಹಿನ್ನೆಲೆಯಲ್ಲಿ ಭರತೇಶ ಶಿಕ್ಷಣ ಸಂಸ್ಥೆ ಮಾಡತ್ತಿರುವ ಕಾರ್ಯ ಪ್ರಶಂಸಾರ್ಹ". ಎಂದು ಬೆಳಗಾವಿ ರುದ್ರಾಕ್ಷಿಮಠದ ಪೀಠಾಧಿಪತಿ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ನುಡಿದರು.

ಇತ್ತಿಚಿಗೆ ಇಲ್ಲಿಯ ಭರತೇಶ ಶಿಕ್ಷಣ ಸಂಸ್ಥೆಯ ವತಿಯಿಂದ ಆಯೋಜಿಸಿದ 12 ನೇ ವರ್ಷದ ಜಿಲ್ಲಾಮಟ್ಟದ ದೇಶಭಕ್ತಿಗೀತೆಗಳ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು.

ಅದ್ಯಕ್ಷತೆ ವಹಿಸಿದ ಸಂಸ್ಥೆಯ ಕಾರ್ಯದರ್ಶಿ ವಿನೋದ ದೊಡ್ಡಣ್ಣವರ ಮಾತನಾಡಿ "ಉತ್ತಮ ಹವ್ಯಾಸಗಳಿಂದ ವ್ಯಕ್ತಿತ್ವ ವಿಕಸನವಾಗುತ್ತದೆ. ಸಂಗೀತ ಎಲ್ಲ ವಿದ್ಯೆಗಳಲ್ಲಿ ಶ್ರೇಷ್ಠ. ಆದರಿಂದ ವಿದ್ಯಾರ್ಥಿಗಳು ಸಂಗೀತ ಹಾಗೂ ಇತರ ಉತ್ತಮ ಹವ್ಯಾಸಗಳನ್ನು ಬೆಳಸಿಕೊಂಡು ದೇಶದ ಪ್ರಗತಿಗೆ ಪೂರಕವಾಗಬೇಕು" ಎಂದು ಕರೆಕೊಟ್ಟರು.

ಸಂಸ್ಥೆಯ ಉಪಾಧ್ಯಕ್ಷ ಶ್ರೀಪಾಲ ಖೇಮಲಾಪುರೆ, ಸ್ವಾಮೀಜಿಯವರನ್ನು ಗೌರವಿಸಿ ಸತ್ಕರಿಸಿದರು. ಎ. ಎ. ಸನದಿ ಪ್ರಾಸ್ತಾವಿಕ ಮಾತುಗಳನ್ನಾಡಿ ಸ್ವಾಗತಿಸಿದರು.

ಎಸ್. ಎನ್. ಅಕ್ಕಿ ವಂದಿಸಿದರು ಶ್ರೀಮತಿ ಕಾಂಚನ ಬೋಗಾರ ನಿರೂಪಿಸಿದರು. ಡಾ ಶ್ರೀರಂಗ ಜೋಶಿ, ಡಾ ಅರುಣ ದೇಸಾಯಿ , ಡಾ ಎಂ ಎನ್ ಸತ್ಯನರಾಯಣ , ಶ್ರೀಮತಿ ಪ್ರತಿಭಾ ಕಳ್ಳಿಮಠ, ದೀಪಾ ಪದಕಿ, ಸ್ವಾತಿ ಹುದ್ದಾರ, ಯೋಗಿತಾ ಪಾಟೀಲ ಹಾಗೂ ಜ್ಯೋತಿ ಮಿರಜಕರ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬಬಲಾದಿ ಮಠಕ್ಕೆ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದ ಶಾಸಕ ಬಾಲಚಂದ್ರ ಜಾರಕಿಹೊಳಿ



ಮೂಡಲಗಿ: ತಾಲ್ಲೂಕಿನ ಇತಿಹಾಸ ಪ್ರಸಿದ್ಧ ಸುಕ್ಷೇತ್ರ ಅರಭಾವಿ ಬಬಲಾದಿ ಮಠಕ್ಕೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಗುರುವಾರ ಸಂಜೆ ಭೇಟಿ ನೀಡಿ ಶ್ರೀ ಗಳ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಬಬಲಾದಿ ಮಠದ ಜಾತ್ರೆಯು ನಾಳೆಯಿಂದ ಅದ್ದೂರಿಯಿಂದ ಜರುಗಲಿದೆ. ನಮ್ಮ ರಾಜ್ಯವಲ್ಲದೇ ನೆರೆಯ ರಾಜ್ಯಗಳ ಅಪಾರ ಭಕ್ತರು ಈ ಐತಿಹಾಸಿಕ ಜಾತ್ರೆಯಲ್ಲಿ ಪಾಲ್ಗೊಳ್ಳುತ್ತಾರೆ. ನನ್ನ ಪೂರ್ವ ನಿಗದಿತ ಕಾರ್ಯಕ್ರಮ ನಿಗದಿಯಾಗಿದ್ದರಿಂದ ನಾಳಿನ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಜಾತ್ರೆಯ ಮುನ್ನಾ ದಿನವಾದ ಇಂದು ಬಬಲಾದಿ ಮಠದ ಅಜ್ಜನವರನ್ನು ಭೇಟಿ ಮಾಡಿ ಆಶೀರ್ವಾದ ಪಡೆಯಲು ಆಗಮಿಸಿದ್ದೇನೆಂದು ಅವರು ಹೇಳಿದರು.

ಜಾತ್ರೆಗಳು ನಮ್ಮ ಇತಿಹಾಸ, ಭವ್ಯ ಪರಂಪರೆಯನ್ನು ಬಿಂಬಿಸುತ್ತವೆ. ದೇವರ ಆಶೀರ್ವಾದದಿಂದ ನಮಗೆ ಪುಣ್ಯ ಪ್ರಾಪ್ತಿಯಾಗುತ್ತದೆ. ನಮ್ಮ ದೇಶದಲ್ಲಿ ನಾನಾ ಜಾತಿ- ಧರ್ಮಗಳು ಇದ್ದರೂ ಎಲ್ಲರೂ ಸಾಮರಸ್ಯದಿಂದ ಬದುಕುತ್ತಿದ್ದೇವೆ. ನಮ್ಮ ಭಾರತೀಯ ಸಂಸ್ಕೃತಿಯು ಇಡೀ ವಿಶ್ವಕ್ಕೆ ಮಾದರಿ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಶ್ರೀ ಮಠದ ಪೀಠಾಧಿಪತಿ ಶಿವಯ್ಯ ಮಹಾ ಸ್ವಾಮಿಗಳು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರನ್ನು ಸತ್ಕರಿಸಿದರು. ಈ ಸಂದರ್ಭದಲ್ಲಿ ಅರಭಾವಿ- ಶಿಂಧಿಕುರಬೇಟ ಗ್ರಾಮಗಳ ಸುತ್ತಲಿನ ಅನೇಕ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ರಾಜ್ಯ ಮಟ್ಟದ ಪ್ರಶಸ್ತಿಗೆ ಭಾಜನ




ಬೆಳಗಾವಿ: "ರಾಷ್ಟ್ರೀಯ ಮತದಾರರ ದಿನ" ವನ್ನಾಗಿ ಪ್ರತಿ ವರ್ಷ ಜನೇವರಿ 25 ರಂದು ಆಚರಿಸಲಾಗುತ್ತಿದೆ. ಆದರಂತೆ ಈ ವರ್ಷವೂ ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ (Nothing like voting, I will vote for sure) ಎಂಬ ವಿಶೇಷ ವಾಕ್ಯದೊಂದಿಗೆ 14ನೇ "ರಾಷ್ಟ್ರೀಯ ಮತದಾರರ ದಿನ" ಕಾರ್ಯಕ್ರಮವನ್ನು ಆಚರಿಸುವ ಸಂಬಂಧ ಭಾರತ ಚುನಾವಣಾ ಅಯೋಗದ ನಿರ್ದೇಶದನ್ವಯ ಚುನಾವಣಾ ಸಂಬಂಧಿಸಿದ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಿದ ಅಧಿಕಾರಿಗಳನ್ನು ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಲಾಗಿರುತ್ತದೆ.

ಪ್ರಸ್ತುತ ಜನೇವರಿ 25, 2024 ರಂದು "ರಾಷ್ಟ್ರೀಯ ಮತದಾರರ ದಿನ" ಕಾರ್ಯಕ್ರಮ ಅಂಗವಾಗಿ ಶ್ರೀ ಬಸವರಾಜ ನಾಗರಾಳ, ಕೆ.ಎ.ಎಸ್., ತಹಶೀಲ್ದಾರ ಹಾಗೂ ಸಹಾಯಕ ಮತದಾರ ನೋಂದಣಾಧಿಕಾರಿಗಳು, 13-ಬೆಳಗಾವಿ ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರ ಇವರನ್ನು ಬೆಳಗಾವಿ ಜಿಲ್ಲೆಯಿಂದ ಅಯ್ಕೆ ಮಾಡಲಾಗಿರುತ್ತದೆ. ದಿನಾಂಕ 25-01-2024 ರಂದು ಸರ್ ಪುಟ್ಟಣ್ಣ ಚೆಟ್ಟಿ ಪುರಭವನ, ಬೆಂಗಳೂರು ಇಲ್ಲಿ ಅಯೋಜಿಸಿದ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಸದರೀ ಅಧಿಕಾರಿಯವರು ಅತ್ಯುತ್ತಮ ಸಹಾಯಕ ಮತದಾರ ನೋಂದಣಾಧಿಕಾರಿಗಳು (Assistant Electoral Registration Officer) ಅಂತ ಗೌರವಕ್ಕೆ ಭಾಜನರಾಗಿ ಮಾನ್ಯ ಘನತವೆತ್ತ ಕರ್ನಾಟಕ ರಾಜ್ಯಪಾಲರಿಂದ ಪ್ರಶಸ್ತಿ ಪಡೆದ್ದರು.

### ಮಾಲಗತ್ತಿ ಅವರ "ಇಳಿಹೊತ್ತು" ಕಥಾ ಸಂಕಲನ ಲೋಕಾರ್ಪಣೆ ಸಮಾರಂಭ

## ಸಾಹಿತ್ಯ ಕ್ಷೇತ್ರದಲ್ಲಿ ಮಹಿಳೆಯರ ಪಾತ್ರ ಅಪಾರ: ಮಂಗಲಾ ಮೆಡಗುಡ್ಡ


ಬೆಳಗಾವಿ: ಸಾಹಿತ್ಯ ಕ್ಷೇತ್ರದಲ್ಲಿ ಮಹಿಳೆಯರು ಪಾತ್ರ ಅಪಾರವಾಗಿದೆ. ಪ್ರಕೃತಿಯ ಸೌಂದರ್ಯ , ಸಮಾಜದ ಬದಲಾವಣೆ ಹಾಗೂ ಪ್ರಗತಿಗೆ ಸಾಕಷ್ಟು ಕೃತಿಗಳನ್ನು ಬರೆದಿದ್ದಾರೆ ಎಂದು ಕ.ಸಾ.ಪ ಅಧ್ಯಕ್ಷರಾದ ಮಂಗಲಾ ಮೆಡಗುಡ್ಡ ಹೇಳಿದರು.

ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಬುಧವಾರ ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘ ಹಾಗೂ ಮಾಲಗತ್ತಿ ಪ್ರಕಾಶನದ ವತಿಯಿಂದ ಆಯೋಜಿಸಲಾದ ಅನಿತಾ ಮಾಲಗತ್ತಿ ಅವರ " ಇಳಿಹೊತ್ತು" ಕಥಾ ಸಂಕಲನ ಲೋಕಾರ್ಪಣೆಗೊಳ್ಳಿಸಿ ಅವರು ಮಾತನಾಡಿದರು.

ಕೃತಿ ಗಳಿಂದ ಮಹಿಳೆಯರು ಇಂದು ಜಾಗತಿಕ ಮಟ್ಟದಲ್ಲಿ ಬೆಳವಣಿಗೆ ಹೊಂದಿದ್ದು ಎಲ್ಲಾ ಕ್ಷೇತ್ರದಲ್ಲೂ ಸಾಧನೆ ಮಾಡುತ್ತಿದ್ದಾರೆ ಎಂದರು. ಕ್ರೀಡೆ, ಸಾಹಿತ್ಯ, ಕಲೆ, ಸಾಂಸ್ಕೃತಿಕ ಕ್ಷೇತ್ರದಲ್ಲಿ ಮುನ್ನಡೆಯುತ್ತಿರುವ ಮಹಿಳೆಯರು ಪುರುಷರಿಗೆ ಸಾವಲೊಡ್ಡಿ ಆರ್ಥಿಕ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಮುನ್ನಡೆಯುತ್ತಿದ್ದಾರೆ. ಜೊತೆಗೆ ಸಾಹಿತ್ಯ ಕ್ಷೇತ್ರಕ್ಕೂ ಮಹಿಳೆಯರು ಸೇವೆ ನೀಡಿದ್ದಾರೆ ಎಂದರು.

ಅನಿತಾ ಮಾಲಗತ್ತಿಯವರ " ಇಳಿಹೊತ್ತು " ಕೃತಿಯಲ್ಲಿ ಬದುಕಿನ ಸರಳತೆ ಅರಳಿದೆ. ಇಂತಹ ಕೃತಿಗಳಿಂದ ಮಹಿಳೆಯರು ಸಮ- ಸಮಾಜದಲ್ಲಿ ಪ್ರಗತಿ ಹೊಂದಲು ಈ ಕೃತಿ ಆಸರೆಯಾಗಿದೆ ಎಂದು ಹೇಳಿದರು.

ರಂಗ ಸಂಪದ ಅದ್ಯಕ್ಷರಾದ ಅರವಿಂದ




ಕುಲಕರ್ಣಿ ಅವರು ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಸಮಾಜದಲ್ಲಿ ನಾವು ಹೇಗೆ ಸರಳವಾಗಿ ಬದುಕಬೇಕೆಂಬ ಉತ್ತಮ ಸಂದೇಶವನ್ನು ಮಾಲಗತ್ತಿ ಕೃತಿಯಲ್ಲಿ ಮನೆ-ಮನಗಳ ಮುಟ್ಟುವಂತೆ ತಿಳಿಸಿದ್ದಾರೆ. ಅನಿತಾ ಮಾಲಗತ್ತಿಯವರ ಸರಳೆಯಂತೆ ಕೃತಿ ಸರಳವಾಗಿದೆ ಎಂದರು.

ಕೃತಿಯಲ್ಲಿ ಸರಳತ ಇದ್ದರೆ ನಾಟಕಕ್ಕೆ ಬಳಸಿಕೊಳ್ಳಲು ಸರಳವಾಗಿರುತ್ತದೆ. ಮಾಲಗತ್ತಿಯವರ ಕೃತಿ ಜೀವನದ ಪಾಠಗಳನ್ನು ಸೂಕ್ಷ್ಮವಾಗಿ ತಿಳಿಸಿದ್ದಾರೆ. ಮನಸ್ಸನ್ನು ಅರಳಿಸುವ ಕೃತಿ ಇದಾಗಿದೆ ಎಂದರು.

ಜ್ಞಾನಪೀಠ ಪುರಸ್ಕೃತ ಚಂದ್ರಶೇಖರ ಕಂಬಾರರವರ ಕಾವ್ಯಗಳಲ್ಲಿ ಅಪಾರ ಜ್ಞಾನ ಅಡಗಿಕೊಂಡಿರುವ ಹಾಗೆಯೇ ಮಾಲಗತ್ತಿಯವರ ಕೃತಿ ಸರಳತೆಯ ಅಡಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹಿರಿಯ ಸಾಹಿತಿ ಡಾ.ಭಾರತಿ ಮಠದ ಅವರು ಮಾತನಾಡಿ, ಕೌಟುಂಬಿಕ ನೆಲಗಟ್ಟು, ಸ್ವಾಭಿಮಾನ ಹಾಗೂ ನಮ್ಮೆಲ್ಲರ ಭಾವನೆಗಳನ್ನು ಮಾಲಗತ್ತಿಯವರು ಕೃತಿ ಮೂಲಕ ಪರಿಚಯಿಸುತ್ತಿರುವುದು ಹೆಮ್ಮೆಯಾಗಿದೆ. ಕುಟುಂಬದೊಂದಿಗೆ , ಸಮಾಜವನ್ನು ಪ್ರೀತಿಯಿಂದ ಕಾಣುವ ಸರಳತೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ತಂದೆ- ತಾಯಿಯ ವಾತ್ಸಲ್ಯದ ಮುಂದೆ ಎಲ್ಲವೂ ಚಿಕ್ಕದ್ದು ಎಂದು ಮಾಲಗತ್ತಿಯವರು ತಿಳಿಸಿದ್ದಾರೆ ಎಂದರು.

ಈ ವೇಳೆ ಸಂಘ- ಸಂಸ್ಥೆಗಳಿಂದ " ಇಳಿಹೊತ್ತು" ಕಥಾ ಸಂಕಲನ ಸಾಹಿತಿ ಅನಿತಾ ಮಾಲಗತ್ತಿ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಚನ್ನಬಸಪ್ಪ ಮಾಲಗತ್ತಿ, ಜಯಶೀಲಾ ಬ್ಯಾಕೋಡ್ ಅಧ್ಯಕ್ಷತೆ ವಹಿಸಿದರು.

# ಉ.ಕ ಪ್ರತಿಭೆಗಳಿಗೆ ಇನ್ನಷ್ಟು ಅವಕಾಶಗಳು ಸಿಗಬೇಕಿದೆ: ಅಂಗರಾಜ ಪಾಟೀಲ

ಹುಬ್ಬಳ್ಳಿ: ಚಿತ್ರರಂಗದಲ್ಲಿ ಉತ್ತರ ಕರ್ನಾಟಕದ ಹಲವು ಪ್ರತಿಭೆಗಳು ಬೆಳಗುತ್ತಿವೆ. ಇನ್ನೂ ಸಾಕಷ್ಟು ಪ್ರತಿಭಾನ್ವಿತ ಕಲಾವಿದರು, ತಂತ್ರಜ್ಞರು ಇಲ್ಲಿದ್ದು ಅವರಿಗೂ ಹೆಚ್ಚಿನ ಅವಕಾಶಗಳು ಸಿಗಬೇಕಿದೆ ಎಂದು ಹುಡಾ ಮಾಜಿ ಅಧ್ಯಕ್ಷ ಲಿಂಗರಾಜ ಪಾಟೀಲ ಹೇಳಿದರು.

ಅವರು ಹುಬ್ಬಳ್ಳಿಯ ಸುಶ ಫಿಲ್ಮ್ ಫ್ಯಾಕ್ಟರಿಯಲ್ಲಿ ಹತ್ತು ವಾರಗಳ ಕಾಲ ವಾರಾಂತ್ಯ ತರಬೇತಿಯಲ್ಲಿ ಅಭಿನಯ, ನಿರ್ದೇಶನ ಹಾಗೂ ಹೊಸ್ಟಿಂಗ್ ತರಬೇತಿ ಪಡೆದವರ ಬಿಳ್ಕೋಡುವ ಮತ್ತು ಪ್ರಮಾಣಪತ್ರ ವಿತರಣೆ ಸಮಾರಂಭದಲ್ಲಿ ದೀಪ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು. ಮನರಂಜನಾ ಕ್ಷೇತ್ರದಲ್ಲಿ ಅವಕಾಶಗಳು ಹೆಚ್ಚಿದ್ದು ಅವುಗಳ ಸದ್ಬಳಕೆ ಸರಿಯಾಗಿ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಅತಿಥಿಗಳಾಗಿ ರಂಗಭೂಮಿ, ಚಿತ್ರರಂಗದ ಸಾಹಿತಿ ಕಲಾವಿದ



ಜಿ.ವಿ.ಹಿರೇಮಠ, ಚಲನಚಿತ್ರ ನಟ,ನಿರ್ಮಾಪಕ ರೇಣುಕುಮಾರ ಸಂಸ್ಥಾನಮಠ, ಚಲನಚಿತ್ರ ವಿತರಕ ಅಹ್ಮದ ಕುಲ್ಮಿ, ಸಿನಿಮಾ ಪತ್ರಕರ್ತರಾದ ಡಾ.ಪ್ರಭು ಗಂಜಿಹಾಳ,ಡಾ.ವೀರೇಶ ಹಂಡಿಗಿ ಪಾಲ್ಗೊಂಡಿದ್ದರು.ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಡಾ.ಶಂಕರ ಸುಗತೆ ಮಾತನಾಡಿ ಉತ್ತರ ಕರ್ನಾಟಕದ ಜನರಿಗೆ ಚಿತ್ರರಂಗದಲ್ಲಿ ಹೆಚ್ಚಿನ ಅವಕಾಶಗಳು ದೊರೆಯಬೇಕು ಎನ್ನುವ ಕಾರಣಕ್ಕೆ ಈ ಸಂಸ್ಥೆ ಹುಟ್ಟು ಹಾಕಲಾಗಿ. ಈಗಾಗಲೇ ರಾಜ್ಯದ ಹಲವಾರು ನಿರ್ಮಾಪಕರು ಚಲನಚಿತ್ರ ನೋಂದಣಿ ಮಾಡಿ ಚಿತ್ರಕೂಡ ನಿರ್ಮಿಸುತ್ತಿದ್ದಾರೆ. ಸರಕಾರ ಇಲ್ಲಿನ ಚಲನಚಿತ್ರ ವಾಣಿಜ್ಯ ಮಂಡಳಿಗೆ ನೆರವು ನೀಡಬೇಕು. ಉತ್ತರ ಕರ್ನಾಟಕದವರಿಗೆ ಅವಕಾಶಗಳಿಲ್ಲ ಎನ್ನುವಂತಿಲ್ಲ. ಸಾಕಷ್ಟು ಕಲಾವಿದರು, ತಂತ್ರಜ್ಞರು ಚಿತ್ರರಂಗದಲ್ಲಿ ಈಗಾಗಲೇ ತೊಡಗಿಕೊಂಡಿದ್ದಾರೆ. ಆದಾಗ್ಯೂ ಈ ಭಾಗದವರೇ ಹೆಚ್ಚು ಇಲ್ಲಿಯ ಸಂಪನ್ಮೂಲಗಳನ್ನು, ವಿವಿಧ ಕಲಾವಿದರು, ತಂತ್ರಜ್ಞರನ್ನು ಪರಿಣಿತರನ್ನು ಬಳಸಿಕೊಂಡು ಉತ್ತರ ಕರ್ನಾಟಕದಲ್ಲಿ ಚಲನಚಿತ್ರದ ಚಟುವಟಿಕೆಗಳು ಹೆಚ್ಚಾಗಲು ಕೈಜೊಡಿಸಬೇಕಾಗಿದೆ ಎಂದರು. ತರಬೇತಿ ಪಡೆದ 20ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ನೀಡಲಾಯಿತಲ್ಲದೆ ಮುಂದಿನ ದಿನಗಳಲ್ಲಿ ಕಿರುಚಿತ್ರ, ಚಲನಚಿತ್ರಗಳಲ್ಲಿ ಅವಕಾಶ ನೀಡಲಾಗುವದೆಂದರು. ತರಬೇತಿ ಪಡೆದ ಗೌತಮ ತಾಂಬೆ, ಪಾವನಿ ಪಾಟೀಲ, ಸಂಜನಾ ತುಂಗಳ ಪ್ರವೀಣ ಸುಂಕದ ಮೊದಲಾದವರು ಅಭಿಪ್ರಾಯ ಹಂಚಿಕೊಂಡರು. ಸಿನಿಮಾ ಪತ್ರಕರ್ತರಾದ ಡಾ.ಪ್ರಭು ಗಂಜಿಹಾಳ,ಡಾ.ವೀರೇಶ ಹಂಡಗಿ ಸಂದರ್ಭೋಚಿತ ಮಾತನಾಡಿದರು. ಇದೇ ಸಂದರ್ಭದಲ್ಲಿ ಡಾ.ವಿ.ಸುರೇಶ ಅವರು ಬರೆದ ಹಾಡಿನ ಧ್ವನಿಸುರುಳಿಯನ್ನು ಬಿಡುಗಡೆ ಮಾಡಲಾಯಿತು.ಕಾರ್ಯಕ್ರಮದಲ್ಲಿ ತರಬೇತಿ ನೀಡಿದ ಸಾಧಕರಾದ ಛಾಯಾಗ್ರಾಹಕ ವಿ. ಸುರೇಶ, ಚಲನಚಿತ್ರ ನಿರ್ದೇಶಕ ಶಿವಾಜಿರಾವ್ ವಾಟಕರ್, ನೃತ್ಯ ನಿರ್ದೇಶಕ ಶಿವಪ್ರಕಾಶ ನಾಯಕ ಅವರನ್ನು ಗೌರವಿಸಿ ಸತ್ಕರಿಸಲಾಯಿತು. ಬೆಳಗಾವಿಯ ನಿರ್ಮಾಪಕ ಸೂರಜ ದೇಸಾಯಿ, ಬೀದರದ ಶಾಂತಕುಮಾರ ಪಾಟೀಲ, ಗಾಯಕ ರವೀಂದ್ರ ರಾಮದುರ್ಗಕರ ಕಾರ್ಯಕ್ರಮದಲ್ಲಿ ಉಪಸ್ಥಿರಿದ್ದರು. ವ್ಯವಸ್ಥಾಪಕ ನಿರ್ದೇಶಕ ಓಂಕಿರಣ ಕೊಂಗೆ ಸ್ವಾಗತಿಸಿದರು. ಕವಿತಾ ವಂದಿಸಿದರು. ವೈಷ್ಣವಿ ಆಚಾರ್ಯ ನಿರೂಪಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089

## 14ನೇ ರಾಷ್ಟ್ರೀಯ ಮತದಾರರ ದಿನಾಚರಣೆ-2024

# ಮತದಾನ ದೇಶದ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿ: ಆರ್.ಸಿ.ಯು ಕುಲಪತಿ ಪ್ರೊ. ವಿಜಯ ನಾಗಣ್ಣವರ

ಬೆಳಗಾವಿ: ಜಗತ್ತಿನ ಅತೀ ದೊಡ್ಡ ಪ್ರಜಾಪ್ರಭುತ್ವ ದೇಶ ಭಾರತ. ದೇಶದಲ್ಲಿ ಪ್ರಜಾಪ್ರಭುತ್ವ ಉಳಿಸಲು ಮತದಾನ ಅತೀ ಮುಖ್ಯವಾಗಿದೆ. ಮತದಾನ ಮಾಡುವುದು ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ ಎಂದು ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ. ವಿಜಯ ನಾಗಣ್ಣವರ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ (ಜ.25) ನಡೆದ 14ನೇ ರಾಷ್ಟ್ರೀಯ ಮತದಾರರ ದಿನಾಚರಣೆ-2024ರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜನ್ಮದಿನ ಪ್ರತಿವರ್ಷ ಬರುತ್ತದೆ ಆದರೆ ಚುನಾವಣೆ ಐದು ವರ್ಷಕ್ಕೊಮ್ಮೆ ಬರುತ್ತದೆ. ಪ್ರತಿಯೊಂದು ಮತವು ಪ್ರಜಾಪ್ರಭುತ್ವವನ್ನು ಬಲಪಡಿಸುತ್ತದೆ. ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಪ್ರಯತ್ನದ ಫಲವಾಗಿ ಪ್ರತಿಯೊಬ್ಬ ಭಾರತೀಯನಿಗೂ ಮತದಾನದ ಹಕ್ಕು ಲಭಿಸಿದೆ. ಅತ್ಯುತ್ತಮ ಆಡಳಿತಗಾರರನ್ನು ಆಯ್ಕೆ ಮಾಡುವ ಶಕ್ತಿ ಮತದಾನಕ್ಕಿದೆ. ಕೆಲ ದೇಶಗಳಲ್ಲಿ ಬಡವರು ಅಥವಾ ಮಹಿಳೆಯರಿಗೆ ಮತದಾನದ ಹಕ್ಕು ಇಲ್ಲ. ಆದರೆ ಅಂಬೇಡ್ಕರ್ ಅವರು ಪ್ರತಿಯೊಬ್ಬ ಭಾರತೀಯನಿಗೆ ಮತದಾನದ ಹಕ್ಕು ಒದಗಿಸಿರುವುದಕ್ಕೆ ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ವಿಶ್ವದಲ್ಲೇ ಭಾರತ ವಿವಿಧ ಕಲೆ, ಸಂಸ್ಕೃತಿ ಅನೇಕ ಇತಿಹಾಸ ಹೊಂದಿರುವ ವಿಭಿನ್ನ ರಾಷ್ಟ್ರವಾಗಿದೆ. ಹೊಸದಾಗಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಂಡ ಯುವಕರಿಗೆ ಉತ್ತಮ ಆಡಳಿತವನ್ನು ಆಯ್ಕೆ ಮಾಡುವ ಅಧಿಕಾರ ಸಿಕ್ಕಿದೆ ಎಂದು ಪ್ರೊ. ವಿಜಯ ನಾಗಣ್ಣವರ ಅವರು ತಿಳಿಸಿದರು.



ಈ ವೇಳೆ ಮತದಾರರ ದಿನಾಚರಣೆ ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಭಾರತ ಚುನಾವಣಾ ಆಯೋಗ ಪ್ರತಿ ವರ್ಷ ಚುನಾವಣೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತ ಬಂದಿದೆ. ಸುಮಾರು 140 ಕೋಟಿ ಹೆಚ್ಚು ಜನಸಂಖ್ಯೆ ಇರುವ ಭಾರತ ದೇಶದ ಚುನಾವಣಾ ಮಾದರಿಯನ್ನು ಇತರೆ ದೇಶದವರು ಅಳವಡಿಸಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

**ರಾಜ್ಯದಲ್ಲೇ ಅತಿ ಹೆಚ್ಚು ಹೊಸ ಮತದಾರ ನೋಂದಣಿ:**

ಜಿಲ್ಲೆಯಲ್ಲಿ 40 ಲಕ್ಷಕ್ಕಿಂತ ಹೆಚ್ಚು ಮತದಾರರಿದ್ದಾರೆ. ಸುಮಾರು 2 ಲಕ್ಷ ಹೊಸ ಮತದಾರ ನೋಂದಣಿಗಳಾಗಿವೆ ಅದರಲ್ಲಿ 1.2 ಲಕ್ಷ ಹೊಸ ಮತದಾರರನ್ನು ಸೇರ್ಪಡೆಗೊಳಿಸಲಾಗಿದೆ. ಇಡೀ ರಾಜ್ಯದಲ್ಲಿ ಅತಿ ಹೆಚ್ಚು ಹೊಸ ಮತದಾರ ನೋಂದಣಿಗಳಾಗಿವೆ ಎಂದು ಹೇಳಿದರು.

17 ವರ್ಷ ತುಂಬಿದ ಎಲ್ಲರೂ ಮುಂಚಿತವಾಗಿ ಮತದಾರ ಪಟ್ಟಿ ಸೇರ್ಪಡೆಗೆ ನೋಂದಣಿ ಮಾಡಿಕೊಳ್ಳಬಹುದು. 18 ವರ್ಷ ಪೂರೈಸಿದ ಬಳಿಕ ನೇರವಾಗಿ ಪೋಸ್ಟ್ ಮೂಲಕ ಮತದಾರ ಚೀಟಿ ಅವರ ಮನೆಗಳಿಗೆ ಕಳುಹಿಸಲಾಗುವುದು. ಅದೇ ರೀತಿಯಲ್ಲಿ ಮಹಾನಗರ ಪಾಲಿಕೆಯಿಂದ ಸುಮಾರು 45 ಸಾವಿರ ಜನರ ಮರಣ ಪ್ರಮಾಣ ಪತ್ರ ನೀಡಿ, ಮರಣ ಹೊಂದಿದ ವ್ಯಕ್ತಿಗಳ ಹೆಸರುಗಳನ್ನು ಮತದಾರ ಪಟ್ಟಿಯಿಂದ ತೆಗೆದು ಪರಿಷ್ಕರಿಸಲಾಗಿದೆ.

ಈ ಮೊದಲು ನಡೆದ ಚುನಾವಣೆಗಳಲ್ಲಿ ನ್ಯಾಯಸಮ್ಮತ ಪಾರದರ್ಶಕ ಚುನಾವಣೆ ನಡೆಸಲು ಜಿಲ್ಲೆಯ ಎಲ್ಲಾ ಅಧಿಕಾರಿಗಳು ನಿರಂತರ ಶ್ರಮಿಸಿದ್ದಾರೆ. ವಿವಿಧ ಇಲಾಖೆಯ ಸುಮಾರು 25 ಸಾವಿರ ಅಧಿಕಾರಿ, ಸಿಬ್ಬಂದಿಗಳು ಚುನಾವಣಾ ಕರ್ತವ್ಯ ನಿರ್ವಹಿಸುವ ಮೂಲಕ ಪಾರದರ್ಶಕ ಚುನಾವಣೆ ನಡೆಸಲು ಸಹಕಾರ ನೀಡಿದ್ದಾರೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

**ಪ್ರತಿ ಮತದಾರರು ನಿಮ್ಮ ಹಕ್ಕು ಚಲಾಯಿಸಿ:**

ಪ್ರಜಾಪ್ರಭುತ್ವದಲ್ಲಿ ಭಾರತ ಅತೀ ದೊಡ್ಡ ದೇಶವಾಗಿದೆ.

ಮತದಾರ ಪಟ್ಟಿಯಲ್ಲಿ ತಮ್ಮ ಕುಟುಂಬದ ಸದಸ್ಯರ ಹೆಸರು ನೋಂದಣಿಯಾಗಿರುವ ಕುರಿತು ಖಾತರಿ ಮಾಡಿಕೊಳ್ಳಬೇಕು. ಪ್ರತಿಯೊಬ್ಬರೂ ಮತದಾನ ಮಾಡುವ ಮೂಲಕ ತಮ್ಮ ಹಕ್ಕು ಚಲಾಯಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಅವರು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ ಅವರು ಭಾರತ ಚುನಾವಣಾ ಆಯೋಗ ಸಂಸ್ಥಾಪನಾ ದಿನವಾಗಿರುವ ಜ.25 ರಂದು ರಾಷ್ಟ್ರೀಯ ಮತದಾರರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಬೆಳಗಾವಿಯಲ್ಲಿ ಅತೀ ಹೆಚ್ಚು ಹೊಸ ಮತದಾರರ ನೋಂದಣಿ ಮಾಡಲಾಗಿರುತ್ತದೆ.

ಪ್ರತಿ ಕಾಲೇಜುಗಳಲ್ಲಿರುವ ಮತದಾರರ ಸಾಕ್ಷರತಾ ಕ್ಲಬ್ ಗಳ ಮೂಲಕವೂ ನೋಂದಣಿ ಅಭಿಯಾನ ಕೈಗೊಂಡು ಎಲ್ಲ ಅರ್ಹರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಬೇಕಿದೆ ಎಂದು ಪಾಲಿಕೆ ಆಯುಕ್ತರು ಹೇಳಿದರು.

**ಪ್ರಶಸ್ತಿ ಪತ್ರ ವಿತರಣೆ:**

ಜಿಲ್ಲಾ ಮಟ್ಟದ ಕನ್ನಡ ಮತ್ತು ಇಂಗ್ಲಿಷ್ ಭಾಷಾ ಪ್ರಭಂದ ಸ್ಪರ್ಧೆ, ಭಿತ್ತಿ ಚಿತ್ರ, ರಸ ಪ್ರಶ್ನೆ ಸೇರಿದಂತೆ ವಿವಿಧ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ಕಾಲೇಜುಗಳ ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಶಸ್ತಿ ಪತ್ರಗಳನ್ನು ನೀಡಿದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಡಿಸಿಪಿ ಸ್ನೇಹ, ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ಕುಲಸಚಿವರಾದ ರಾಜಶ್ರೀ ಜೈನಾಪುರ, ಮಹಾನಗರ ಪಾಲಿಕೆ ಉಪ ಆಯುಕ್ತರಾದ ಉದಯಕುಮಾರ ತಳವಾರ, ರೇಷ್ಮಾ ತಾಳಿಕೋಟಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕ ರವಿ ಪಂಗರಪ್ಪನವರ, ಶಿಕ್ಷಣ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು. ಹಾಗೂ ವಿವಿಧ ಶಾಲಾ ಕಾಲೇಜು, ಉಪನ್ಯಾಸಕರು, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

**ಮತದಾರರ ಜಾಗೃತಿ ಜಾಥಾ:**

ಇದಕ್ಕೂ ಮುಂಚೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಚನ್ನಮ್ಮ ವೃತ್ತದ ಮಾರ್ಗವಾಗಿ ಕುಮಾರ ಗಂಧರ್ವ ಕಲಾ ಮಂದಿರದವರೆಗೆ 14ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಮತದಾನದ ಕುರಿತು ವಿಶೇಷ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಯಿತು.

ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಲ್ಲಾ ಸ್ವೀಪ್ ಕಮಿಟಿ ಹಾಗೂ ಜಿ.ಪಂ ಮುಖ್ಯ ನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ, ಜಿ.ಪಂ ಮುಖ್ಯ ಯೋಜನಾ ನಿರ್ದೇಶಕ ರವಿ ಬಂಗಾರಪ್ಪನವರ, ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

**ಮತದಾರರ ಪ್ರತಿಜ್ಞಾ ವಿಧಿ:**

ಪ್ರಜಾಪ್ರಭುತ್ವದಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೆ ಮತ ಚಲಾಯಿಸುತ್ತೇವೆಂದು ಈ ಮೂಲಕ ಪ್ರತಿಜ್ಞೆ ಸ್ವೀಕರಿಸುತ್ತೇವೆ.

### 14ನೇ ರಾಷ್ಟ್ರೀಯ ಮತದಾರರ ದಿನಾಚರಣೆ: ಜನ ಜಾಗೃತಿಗಾಗಿ ಪ್ಯಾರಾಸೇಲಿಂಗ್ ಮಾಡುವ ಮೂಲಕ ಪ್ರಚಾರಕ್ಕೆ ಚಾಲನೆ



ಬೆಳಗಾವಿ: ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಮತದಾನ ಹಾಗೂ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಕುರಿತು ಜನಜಾಗೃತಿ ಮೂಡಿಸಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ಯಾರಾಸೇಲಿಂಗ್ ಮಾಡುವ ಮೂಲಕ ಪ್ರಚಾರಕ್ಕೆ ಚಾಲನೆ ನೀಡಿದರು. ಸುವರ್ಣ ವಿಧಾನಸೌಧದ ಬಳಿಯ ಅಲರವಾಡ ಹೊರವಲಯದಲ್ಲಿ ಪ್ಯಾರಾಸೇಲಿಂಗ್ ಕೈಗೊಂಡರು.

# ಜಿಲ್ಲಾ ಮಟ್ಟದ ಕ್ವಿಜ್ ಕಾರ್ಯಕ್ರಮದಲ್ಲಿ ಸಂಗೊಳ್ಳಿ ರಾಯಣ್ಣ ಕಾಲೇಜಿಗೆ ಪ್ರಥಮ ಸ್ಥಾನ



ಬೆಳಗಾವಿ: ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿಗಳು, ಜಿಲ್ಲಾ ಸ್ವೀಪ್ ಸಮಿತಿ ಅವರು ರಾಷ್ಟ್ರೀಯ ಮತದಾರರ ದಿನಾಚರಣೆ ನಿಮಿತ್ಯ ಆಯೋಜಿಸಿದ್ದ ಜಿಲ್ಲಾಮಟ್ಟದ ಕ್ವಿಜ್ ಕಾರ್ಯಕ್ರಮದಲ್ಲಿ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಕಾಲೇಜು ಪ್ರಥಮ ಸ್ಥಾನ ಪಡೆದಿದೆ.

ಅಂತಿಮ ವರ್ಷದ ವಿದ್ಯಾರ್ಥಿಗಳಾದ ಕುಮಾರಿ ಶೀತಲ ಶೇಟ್, ಕುಮಾರಿ ಯಲ್ಲವ್ವಾ ನಾಯಕ್, ಪ್ರವೀಣ್ ಹಡಪದ್ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ ಇವರಿಗೆ ಬೆಳಗಾವಿ ಜಿಲ್ಲಾಧಿಕಾರಿಗಳಾದ ಶ್ರೀ ನಿತೇಶ್ ಪಾಟೀಲ್, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ವಿಜಯ ನಾಗಣ್ಣವರ್, ಕುಲಸಚಿವರಾದ ಶ್ರೀಮತಿ ರಾಜಶ್ರೀ ಜೈನಾಪುರ ಅವರು ಪ್ರಶಸ್ತಿ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಿದರು. ಇವರಿಗೆ ಪ್ರಾಚಾರ್ಯರಾದ ಡಾ. ಶಂಕರ್ ತೇರದಾಳ ಇಐಅ ಹಾಗೂ ಗಿಂಈ ಕೋಶದ ಸಂಯೋಜಕರಾದ ಡಾ. ಮಲ್ಲೇಶ ದೊಡ್ಡಲಕ್ಕನ್ನವರ , ರಾಜ್ಯಶಾಸ್ತ್ರ ವಿಭಾಗದ ಉಪನ್ಯಾಸಕರಾದ ಶ್ರೀ ಪ್ರಕಾಶ್ ಕಮತಿ ಹಾಗೂ ಕಾಲೇಜಿನ ಎಲ್ಲ ಬೋದಕ ಬೋಧಕರ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಪ್ರಜಾಪ್ರಭುತ್ವದಲ್ಲಿ ಮತದಾನವು ಒಂದು ಪವಿತ್ರ ಕಾರ್ಯ: ಮಹಾಂತೇಶ ಕವಟಗಿಮಠ

ಬೆಳಗಾವಿ: ಇಲ್ಲಿ ಮತದಾನವು ಒಂದು ಗೌರವಾನ್ವಿತ,ಪವಿತ್ರ ಕಾರ್ಯವಾಗಿದೆ. ಯಾವ ವ್ಯಕ್ತಿ ನ್ಯಾಯ, ನೀತಿ, ಧರ್ಮ, ಸತ್ಯದಿಂದ ಸಮಾಜಕ್ಕಾಗಿ, ರಾಷ್ಟ್ರಕ್ಕಾಗಿ ತನ್ನ ಇಡೀ ಬದುಕನ್ನು ಸಮರ್ಪಿಸುತ್ತಾನೋ ಅಂತಹ ಧೀಮಂತ ವ್ಯಕ್ತಿಯನ್ನು ನಮ್ಮ ಪವಿತ್ರ ಮತದಾನದಿಂದ ಆರಿಸಿ, ಸಮಾಜ ಸೇವೆಗೆ ಅನಿಗೊಳಿಸುವ ಕಾರ್ಯ ಎಲ್ಲರದೆಂದು ಮಾಜಿ ವಿಧಾನ ಪರಿಷತ್ ಮುಖ್ಯ ಸಚೇತಕ ಮಹಾಂತೇಶ ಕವಟಗಿಮಠ ಹೇಳಿದರು.

ಅವರು ಲಿಂಗರಾಜ ಕಾಲೇಜು ಹಾಗೂ ಆರ್ಎಲ್ ವಿಜ್ಞಾನ ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ಜರುಗಿದ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ, ಪ್ರಧಾನಿ ನರೇಂದ್ರ ಮೋದಿಯವರ ನೇರಪ್ರಸಾರದ ಕಾರ್ಯಕ್ರಮಕ್ಕೂ ಮೊದಲು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

'ಪ್ರಪಂಚದ ಪ್ರಜಾಪ್ರಭುತ್ವದ ಅತಿ ದೊಡ್ಡ ರಾಷ್ಟ್ರಗಳಲ್ಲಿ ಭಾರತವು ಒಂದು. ಸಮಾಜವಾದಿ,



ಸಮತಾವಾದಿ, ಪ್ರಜಾಪ್ರಭುತ್ವವು ನಮ್ಮ ಸಮಾಜದಲ್ಲಿ ಅಸ್ತಿತ್ವಕ್ಕೆ ಬರಬೇಕಾದರೆ ಎಲ್ಲಾ ಪ್ರಜೆಗಳೂ ಪವಿತ್ರ ಮನಸ್ಸಿನಿಂದ ಮತದಾನ ಮಾಡಿ ನಮ್ಮ ಒಳ್ಳೆಯ ನಾಯಕನನ್ನು ಆರಿಸಿ ತಂದು ಸಮಾಜ ಸೇವೆಗೆ ತರುವುದು ಒಂದು ಮಹತ್ವದ ಕಾರ್ಯವಾಗಿದೆ' ಎಂದರು.

'ಮತದಾನವು ಸುಲಭವಾಗಿ ದೊರೆತಿಲ್ಲ. ಭಾರತವು ಪರಕೀಯ ಬಂಧನದಿಂದ ಮುಕ್ತವಾಗಿ ತನ್ನದೇ ಸಂವಿಧಾನವನ್ನು ಸಿದ್ಧಪಡಿಸಿಕೊಂಡು ಮತದಾನದ ಮೂಲಕ ಜನಪ್ರತಿನಿಧಿಯನ್ನು ಆಯ್ಕೆ ಮಾಡುವ ಸ್ವಾತಂತ್ರ್ಯವನ್ನು ಪಡೆದಿದ್ದು ವಿಶ್ವದಲ್ಲಿಯೇ ಪ್ರಥಮವೆನ್ನಬೇಕು.ನಮ್ಮ ಹೊಸ ಸಂವಿಧಾನವು ಎಲ್ಲಾ ವಯಸ್ಕ ನಾಗರೀಕರಿಗೆ ಮತದಾನದ ಹಕ್ಕನ್ನು ನೀಡಿ ದೊಡ್ಡ ಕ್ರಾಂತಿಯನ್ನು ಮಾಡಿದೆ. ಭಾರತವು ಒಂದು ಜಾತ್ಯತೀತ, ಪ್ರಜಾಪ್ರಭುತ್ವ ದೊಡ್ಡ ರಾಷ್ಟ್ರ. ವಿಶ್ವದ ಮುಂದುವರೆದ ರಾಷ್ಟ್ರ ಬ್ರಿಟನ್ನಿನಲ್ಲಿ ಮಹಿಳೆಯರಿಗೆ ಮತದಾನದ ಹಕ್ಕು ಇರಲಿಲ್ಲ. ಶತಶತಮಾನಗಳ ಹೋರಾಟದ ಫಲವಾಗಿ ತೀರ ಇತ್ತೀಚಿಗೆ ಮತದಾನದ ಹಕ್ಕನ್ನು ಪಡೆದುಕೊಂಡಿದ್ದಾರೆ. ಅಮೆರಿಕ ಸಂಯುಕ್ತ ಸಂಸ್ಥಾನದಲ್ಲಿ ಕೂಡ ಮಹಿಳೆಯರಿಗೆ ಮತದಾನದ ಹಕ್ಕು ಇರಲಿಲ್ಲ. ಅವರು 1919 ರಲ್ಲಿ ಅದನ್ನು ಪಡೆದುಕೊಂಡು ಪುರುಷರಿಗೆ ಸರಿ ಸಮಾನರಾದರು. ಸ್ವಿಟ್ಜರ್ಲ್ಯಾಂಡಿನಲ್ಲಿ 1971ರಲ್ಲಿ ಮಹಿಳೆಯರಿಗೆ ಮತದಾನದ ಹಕ್ಕನ್ನು ನೀಡಿತು. ಫ್ರಾನ್ಸ್ ಮಹಿಳೆಯರಿಗೆ 1945 ರಲ್ಲಿ, ಇಟಲಿಯಲ್ಲಿ 1948ರಲ್ಲಿ ಮತದಾನದ ಹಕ್ಕನ್ನು ನೀಡಿದೆ.ಇದೆಲ್ಲವನ್ನೂ ಗಮನಿಸಿದಾಗ ಭಾರತ ವಿಶ್ವದ ಬೃಹತ್ ಗಣತಂತ್ರವನ್ನು ಹೊಂದಿ ಸಮಾನ ಮತದಾನವನ್ನು ನೀಡಿದ ದೇಶವಾಗಿದೆ' ಎಂದು ತಿಳಿಸಿದರು.

ಮತದಾನವು ಪ್ರಜಾಪ್ರಭುತ್ವದ ವಿಜಯ. ಅದು ನಮ್ಮ ಪವಿತ್ರ ಹಾಗೂ ಶ್ರೇಷ್ಠ ಕಾರ್ಯ. ಮತ ಚಲಾವಣೆ ಪ್ರತಿಯೊಬ್ಬ ಭಾರತೀಯನ ಕರ್ತವ್ಯ. ಮತ ಚಲಾಯಿಸಿ ವ್ಯಕ್ತಿಗೆ ಪ್ರಶ್ನಿಸುವ ನೈತಿಕ ಹಕ್ಕು ದೊರೆಯುತ್ತದೆ. ಮತದಾನವು ಸುಭದ್ರ ರಾಷ್ಟ್ರಕ್ಕೆ ಅಡಿಗಲ್ಲು ಹಾಕುತ್ತದೆ. ಸಂವಿಧಾನದನ್ವಯ ಮತದಾನ ಪ್ರಜೆಗಳ ಹಕ್ಕು. ಮತದಾರರ ಮತದಾನದಿಂದ ಮಾತ್ರ ಸರಕಾರ ರಚನೆ ಸಾಧ್ಯ ಶಾಸನಸಭೆಯ ಕಟ್ಟಡ, ಮಂತ್ರಿಮಂಡಲದ ಗೋಪುರ ರೂಪಗೊಳ್ಳಬೇಕಾದರೆ ಮತದಾನವು ಅವಶ್ಯಕ.ಮತದಾನದಿಂದ ಮಾತ್ರ ರಾಜ್ಯ ಮತ್ತು ರಾಷ್ಟ್ರಗಳು.ಮತದಾನದ ಪ್ರಜೆಗಳ ಮಹಾನ್ ರಾಜಕೀಯ ಅಸ್ತ್ರ ಮಾತ್ರವಲ್ಲದೇ ಮತದಾನವು ಪ್ರಜೆಗಳ ಧ್ವನಿ.ಎಲ್ಲರೂ ಮತದಾನ ಮಾಡುವುದು ಇಂದು ಅತೀ ಅವಶ್ಯವಾಗಿದೆ ಎಂದು ವಿದ್ಯಾರ್ಥಿಗಳಿಗೆ ಕರೆನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಘಟಕದ ಸಂಚಾಲಕ ನ್ಯಾಯವಾದಿ ಎಂ.ಬಿ.ಝಿರಲಿ, ಮಾಜಿ ಶಾಸಕ ಅನೀಲ ಬೆನಕೆ, ಉಜ್ವಲಾ ಬಡವಾನಾಚಾ, ಪ್ರಾಚಾರ್ಯ ಡಾ.ಎಚ್.ಎಸ್. ಮೇಲಿನಮನಿ, ಡಾ.ಜ್ಯೋತಿ ಕವಳೇಕರ, ಗಿರಿಜಾ ಹಿರೇಮಠ, ವಿಶ್ವನಾಥ ಕಾಮಗೋಳ, ದಿಗ್ವಿಜಯ ಸಿದ್ನಾಳ ಮೊದಲಾದವು ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಮತದಾನ ಕುರಿತ ಪ್ರಧಾನಿ ನರೇಂದ್ರ ಮೋದಿಜಿಯವರ ನೇರಪ್ರಸಾರದ ಮಾತುಗಳನ್ನು ಆಲಿಸಿದರು.

# ಬೇರೊಬ್ಬಳ ಮೊಹಕ್ಕೆ ಪತ್ನಿಯನ್ನು ಹತ್ಯೆಗೈದು ಕೆರೆಗೆ ಎಸೆದ ಪಾಪಿಪತಿ




ದಾವಣಗೆರೆ: ಅಕ್ರಮ ಸಂಬಂಧಕ್ಕೆ ಅಡ್ಡಿಯಾಗಿದ್ದ ಪತ್ನಿಯನ್ನೇ ಪತಿ ಕೊಲೆ ಮಾಡಿ ಮೃತದೇಹವನ್ನು ಗೋಣಿ ಚೀಲದಲ್ಲಿ ತುಂಬಿಸಿ ಕೆರೆಗೆ ಎಸೆದ ಘಟನೆ ದಾವಣಗೆರೆ ತಾಲೂಕಿನ ಕೊಡಗನೂರು ಗ್ರಾಮದ ಬಳಿ ನಡೆದಿದೆ.

ಕಾವ್ಯ (21) ಕೊಲೆಯಾದ ಮಹಿಳೆಯಾಗಿದ್ದು, ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಕಾಗಳಗೆರೆ ಗ್ರಾಮದ ನಿವಾಸಿ ಸಚಿನ್ (24) ಕೊಲೆ ಮಾಡಿದ ಪತಿಯಾಗಿದ್ದಾನೆ. ಐದು ವರ್ಷಗಳ ಹಿಂದೆ ಸಾಸಲುಹಳ್ಳ ಗ್ರಾಮದ ಕಾವ್ಯ ಎಂಬಾಕೆಯನ್ನು ಸಚಿನ್ ಮದುವೆಯಾಗಿದ್ದ. ದಾವಣಗೆರೆ ತಾಲೂಕಿನ ಕಡ್ಲೆಬಾಳು ಗ್ರಾಮದ ಚೈತ್ರ (21) ಎನ್ನುವ ಯುವತಿ ಜೊತೆ ಸಂಬಂಧ ಇಟ್ಟುಕೊಂಡು ಕಾವ್ಯಾಳನ್ನು ಮದುವೆಯಾಗಿದ್ದನು.


ಈ ಅಕ್ರಮ ಸಂಬಂಧಕ್ಕೆ ಕಾವ್ಯಾ ಅಡ್ಡಿಯಾಗುತ್ತಿದ್ದಾಳೆ ಎಂದು ಸಚಿನ್ ಮತ್ತು ಚೈತ್ರಾ ಸೇರಿಕೊಂಡು ಕಾವ್ಯಾಳನ್ನು ಕೊಲೆ ಮಾಡಿದ್ದಾರೆ. ಬಳಿಕ ಗೋಣಿ ಚೀಲದಲ್ಲಿ ಕಾವ್ಯಾಳ ಮೃತದೇಹವನ್ನು ತುಂಬಿಸಿ ಕೊಡಗನೂರು ಕೆರೆಗೆ ಹಾಕಿದ್ದರು. 10 ದಿನಗಳ ಹಿಂದೆ ನಡೆದ ಈ ಕೊಲೆ ಪ್ರಕರಣ ಇದೀಗ ಬಯಲಿಗೆ ಬಂದಿದ್ದು, ಸ್ಥಳಕ್ಕೆ ಆಗಮಿಸಿದ ಪೊಲೀಸರು, ಮೃತದೇಹವನ್ನು ಕೆರೆಯಿಂದ ಹೊರತೆಗೆದಿದ್ದಾರೆ.

# ಬೆಳಗಾವಿಯಲ್ಲಿ ಹಾಸ್ಯ ಚಕ್ರವರ್ತಿ ಡಾ.ಯಶವಂತ ಸರದೇಶಪಾಂಡೆ ಅವರ ನಾಟಕ ಪ್ರದರ್ಶನ

ಬೆಳಗಾವಿ: ಹಾಸ್ಯ ಚಕ್ರವರ್ತಿ ಡಾ.ಯಶವಂತ ಸರದೇಶಪಾಂಡೆ ಅವರ ನಾಟಕ ಕನ್ನಡ ನಗೆಯ ನಾಟಕ "ಸೂಪರ್ ಸಂಸಾರ" ದಿನಾಂಕ:27-01-2024 ರಂದು ಲೋಕಮಾನ್ಯ ಮಂದಿರದಲ್ಲಿ ಹಾಗೂ ದಿನಾಂಕ:28-01-2024 ರಂದು ನೆಹರು ನಗರದಲ್ಲಿರುವ ಕನ್ನಡ ಭವನದಲ್ಲಿ ಎರಡೂ ದಿನ ಸಂಜೆ 6-30ಕ್ಕೆ ಪ್ರದರ್ಶನವಾಗಲಿದೆ.

ಈ ನಾಟಕದಲ್ಲಿ ಗುರು ಇನ್ಸಟಿಟ್ಯೂಟ್, ಹುಬ್ಬಳ್ಳಿ ತಂಡ ಅಭಿನಯಿಸುತ್ತಿದ್ದು, ಮರಾಟಿಯ ಸಂತೋಷ ಪವಾರ ರಚಿಸಿದ್ದು, ಕನ್ನಡಕ್ಕೆ ಡಾ.ಯಶವಂತ ಸರದೇಶಪಾಂಡೆ ಅನುವಾದಿಸಿ ನಿರ್ದೇಶಿಸಿದ್ದಾರೆ.

ಈಗಾಗಲೇ ಕರ್ನಾಟಕದ ವಿವಿಧ ಊರುಗಳಲ್ಲಿ ತುಂಬಿದ ಸಭಾಗೃಹದಲ್ಲಿ ಯಶಸ್ವಿ ಪ್ರದರ್ಶನ ಕಂಡು ಜನಮನ ಗೆದ್ದಿರುವ "ಸೂಪರ್ ಸಂಸಾರ" ನಾಟಕ ಪ್ರೇಕ್ಷಾಗೃಹದಲ್ಲಿ ನಗೆಯ ಸುನಾಮಿಯೇ ಎಬ್ಬಿಸಿದೆ. ರಂಗದ



ಮೇಲೆ ರವಿ ಕುಲಕರ್ಣಿ, ಪ್ರಿಯಾ ಕುಲಕರ್ಣಿ, ಶಿಲ್ಪಾ ಪಾಂಡೆ, ಕೃಷ್ಣಮೂರ್ತಿ ಗಾಂವಕರ, ಅರ್ಪಿತಾ ಹೆಗ್ಗೂಡು, ಪ್ರದೀಪ ಮುಧೋಳ ಹಾಗೂ ಡಾ.ಯಶವಂತ ಸರದೇಶಪಾಂಡೆ ನೈಜ ಅಭಿನಯ ನೀಡಿದರೆ, ರಂಗಕರ್ಮಿ ನಾಗರಾಜ ಪಾಟೀಲ ಬೆಳಕಿನ ವಿನ್ಯಾಸ,ಜೀವನ ಫರ್ನಾಂಡೀಸ ಧ್ವನಿ ನಿರ್ವಹಣೆ, ಪ್ರವೀಣ ಡಿ.ರಾವ್ ಹಿನ್ನೆಲೆ ಸಂಗೀತವನ್ನು ನೀಡಿದ್ದಾರೆ.

ದಿ:28-01-2024ರಂದು ನಗರದ ಕನ್ನಡ ಭವನದಲ್ಲಿ ಜರಗುವ ನಾಟಕ ಪ್ರದರ್ಶನ ಕಾರ್ಯಕ್ರಮ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಪ್ರಭಾಕರ ಕೋರೆ, ಶ್ರೀಮತಿ ವಿಧ್ಯಾವತಿ ಭಜಂತ್ರಿ, ಉಪನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ,ಬೆಳಗಾವಿ ಆಗಮಿಸಲಿರುವರು.

ವಿಶೇಷ ಅಹ್ವಾನಿತರಾಗಿ ಡಾ.ಬಸವರಾಜ ಜಗಜಂಪಿ, ಡಾ.ಸರಜೂ ಕಾಟ್ಕರ್, ಡಾ.ಎಚ್.ಬಿ. ರಾಜಶೇಖರ, ಮುಂತಾದವರು ಬರಲಿರುವರು.

ಅಂದು ವೈದ್ಯಕೀಯ ಸೇವೆಗಾಗಿ ಕಲಾಸಕ್ತ ಡಾ.ಸಚಿನ ಮೌಲಿ, ಸಾಹಿತಿಗಳಾದ ಬಸವರಾಜ ಗಾರ್ಗಿ ಅವರಿಗೆ ಸನ್ಮಾನಿಸಲಾಗುವುದು.

"ಸೂಪರ್ ಸಂಸಾರ" ಎಂಬ ನಾಟಕವು ಅಪ್ಪಟ ಉತ್ತರ ಕರ್ನಾಟಕ ಕಲಾವಿದರಿಂದ ಅಭಿನಯಿಸಲ್ಪಡುತ್ತಿದ್ದು, ಸಾಮಾಜಿಕ ಮೌಲ್ಯ ಸಾರುವ ಸುಂದರ ರಂಗಪ್ರಯೋಗವನ್ನು ಬೆಳಗಾವಿಯ ನಾಟಕಾಸಕ್ತರು ತಮ್ಮ ಬಂಧು ಬಾಂಧವ ಮಿತ್ರರೊಂದಿಗೆ ಆಗಮಿಸಿ ಆನಂದಿಸಬೇಕೆಂದು ಡಾ.ಯಶವಂತ ಸರದೇಶಪಾಂಡೆ ಅವರು ಪ್ರಕಟಣೆಯಲ್ಲಿ ತಿಳಿಸಿರುವರು.

# ಡಾ. ಬಾಬಾ ಸಾಹೇಬ್ ರ ಪ್ರತಿಮೆಗಳಿಗೆ ರಕ್ಷಣೆ ನೀಡಿ



ಕೆಂಭಾವಿ: ಕಲಬುರಗಿ ನಗರದ ಕೋಟನೂರ (ಡಿ) ಬಡಾವಣೆಯ ಲುಂಬಿನವನದಲ್ಲಿರುವ ಭಾರತ ರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ಪ್ರತಿಮೆಗೆ ಅವಮಾನಗೊಳಿಸಿದ ಕಿಡಿಗೇಡಿಗಳನ್ನು ತಕ್ಷಣ ಬಂದಿಸುವಂತೆ ಆಗ್ರಹಿಸಿ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಸಾಮೂಹಿಕ ದಲಿತಪರ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟಿಸಿ ಮುಖ್ಯ ಮಂತ್ರಿಗಳಿಗೆ ಬರೆದ ಮನವಿಯನ್ನು ಉಪ ತಹಶಿಲ್ದಾರರಿಗೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಲಾಲಪ್ಪ ಹೊಸಮನಿ, ಶರಣು ಹೂವಿನಳ್ಳಿ ಸೇರಿದಂತೆ ಹಲವರು ಮಾತನಾಡಿ ದೇಶದಲ್ಲಿ ಇಡೀ ಸಮಾಜದ ಸಮಾನತೆಗಾಗಿ ತಮ್ಮ ಜೀವನವನ್ನ ಸವೇಸಿದ, ಶೋಷಿತ ಸಮುದಾಯಗಳಿಗೆ ಬದುಕುವ ಹಕ್ಕನ್ನು ಕೊಟ್ಟ ಮಹಾ ಮಾನವತಾವಾದಿ ಡಾ. ಬಾಬಾ ಸಾಹೇಬರಿಗೆ ಅಪಮಾನ ಮಾಡಿರುವದು ದುರಂತ ಸಂಗತಿ ಆಗಿದೆ.

ಇಂತಹ ಘಟನೆ ಪದೇ ಪದೇ ಅಪಮಾನವಾಗುತ್ತಲೇ ಇದ್ದರೂ ಸರ್ಕಾರ ಕಠಿಣ ಕ್ರಮ ತೆಗೆದುಕೊಳ್ಳುತ್ತಿಲ್ಲ, ಸರ್ಕಾರದ ಈ ಸಡಿಲ ಧೋರಣೆಯೇ ದುಷ್ಕರ್ಮಿಗಳಿಗೆ ಆಸ್ಪದವಾಗಿದೆ. ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರ ಪುತ್ತಳಿಗಳ ರಕ್ಷಣೆಗೆ ಸಿಸಿ ಕ್ಯಾಮರಾ ಅಳವಡಿಸಿ ಪೋಲಿಸ್ ಇಲಾಖೆಯಿಂದ ಸೂಕ್ತ ರಕ್ಷಣೆ ನೀಡಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಡಿವಾಳಪ್ಪ ಕಿರದಳ್ಳಿ, ಶರಣಪ್ಪ ಗಾಯಕೋಡ್, ಬಸವರಾಜ್ ಚಿಂಚೋಳಿ, ಗೋಪಾಲ್ ಕಡಕಲ್, ಬಸವಣ್ಣಪ್ಪ ಮಾಳಳ್ಳಿಕರ್, ಲಕ್ಷ್ಮಣ ಮುದ್ನೂರ್, ನಿಂಗಪ್ಪ ಯಾತ್ತಾಪುರ್, ಅಂಬರೀಶ್ ಬೊಮ್ಮನಹಳ್ಳಿ, ಮರೇಪ್ಪ ಗೌಂಡಿ, ಸುರೇಶ್ ಮಾಳಳ್ಳಿಕರ್, ಜುಮ್ಮಣ್ಣ ಕಟ್ಟಿಮನಿ, ರಾಯಪ್ಪ ಯತ್ನಾಳ, ಭೀಮು ಮಳಿಕೇರಿ, ಪರಶುರಾಮ್ ಮುದ್ನೂರ್, ಮರೇಪ್ಪ ಕಟ್ಟಿಮನಿ, ರಾಜು ಯಾಳಗಿ, ಈರಪ್ಪ ಬಡಿಗೇರ್, ಮಾಂತೇಶ್ ಯಾಳಗಿ, ಪರಶುರಾಮ್ ಅಳುಗುಂಡಗಿ ಸೇರಿದಂತೆ ದಲಿತಪರ ಸಂಘಟನೆಯ ಪದಾಧಿಕಾರಿಗಳು ಇದ್ದರು.

# ಕುಡಿಯುವ ನೀರು, ಜಾನುವಾರಗಳಿಗೆ ಮೇವಿನ ಕೊರತೆ ಉಂಟಾಗದಂತೆ ಮುನ್ನಚ್ಚರಿಕೆವಹಿಸಿ: ಇಒ ಪ್ರವೀಣ ಪಾಟೀಲ್

ಕಾಗವಾಡ: ಬರಗಾಲ ಘೋಷಣೆಯಾಗಿರುವುದರಿಂದ ಕುಡಿಯುವ ನೀರು, ಜಾನುವಾರಗಳಿಗೆ ಮೇವಿನ ಕೊರತೆ ಉಂಟಾಗದಂತೆ ಮುನ್ನಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಇಒ ಪ್ರವೀಣ ಪಾಟೀಲ್ ಸೂಚಿಸಿದರು.

ಇಲ್ಲಿನ ಪ್ರವಾಸಿ ಮಂದಿರದಲ್ಲಿ ಗುರುವಾರ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಹಶೀಲ್ದಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ತಾಲ್ಲೂಕು ಮಟ್ಟದ ಅಧಿಕಾರಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕಿನ ಎಲ್ಲ ಗ್ರಾಮಗಳ ಕುಡಿಯುವ ನೀರಿನ ಟ್ಯಾಂಕ್ ಗಳನ್ನು ತಿಂಗಳಿಗೊಮ್ಮೆ ಶುಚಿಗೊಳಿಸಬೇಕು ಪ್ರತಿ ಗ್ರಾಮ ಪಂಚಾಯತಿಯಲ್ಲಿ ಕಡ್ಡಾಯವಾಗಿ ಒಂದು ನೀರಿನ ಟ್ಯಾಂಕರ್ ಹೊಂದಿರಬೇಕು. ಟ್ಯಾಂಕರ್ ಇಲ್ಲದ ಕಡೆ ಟ್ಯಾಂಕರ್ ಖರೀದಿಸಬೇಕು. ಜೊತೆಗೆ ಜಾನುವಾರಗಳಿಗೆ ಮೇವಿನ ವ್ಯವಸ್ಥೆ ಮಾಡಿಕೊಳ್ಳಬೇಕು. ಎಂದು ತಿಳಿಸಿದರು.



ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿ ಮುರುಗಾಲಿ ಮಾತನಾಡಿ , ಕೃಷ್ಣಾ ನದಿಯಲ್ಲಿ ಮಾರ್ಚ್ ಅಂತ್ಯದವರೆ ನೀರು ಲಭ್ಯವಿದೆ. ನದಿ ತೀರದ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಂಟಾಗುವುದಿಲ್ಲ. ಮಂಗಸೂಳಿ ಮತ್ತು ಕೆಂಪವಾಡ ಗ್ರಾಮ ಪಂಚಾಯತಗಳ ವ್ಯಾಪ್ತಿ ಮಾತ್ರ ಸಮಸ್ಯೆ ಕಂಡು ಬರುವ ಸಾಧ್ಯತೆ ಇದ್ದು, ಮುಂಜಾಗೃತೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಶಾಲೆಗಳಲ್ಲಿ ಕಂಪೌಂಡ ಮತ್ತು ಆಟದ ಮೈದಾನ ಬೇಡಿಕೆ ಇದೆ. ಮನರೇಗಾ ಯೋಜನೆಯಡಿ ಕಾಮಗಾರಿಗಳ ಅನುಷ್ಠಾನಗೊಳಿಸಲು ತಿಳಿಸಿದರು. ಬಿಇಒ ಅವರು ಮಾತನಾಡಿ, ಕೆಲವೆಡೆ ಗ್ರಂಥಾಲಯ ಕಾಮಗಾರಿ ಪೂರ್ಣಗೊಂಡಿದ್ದು, ಪುಸ್ತಕರಗಳ ಅವಶ್ಯಕೆ ಇದ್ದು, ಸರಬರಾಜು ಮಾಡಲು ತಿಳಿಸಿದರು.

ತಹಶೀಲ್ದಾರ್ ರಾಜೇಶ ಬುರ್ಲಿ ಮಾತನಾಡಿ, ಜುಗೂಳ, ಕೃಷ್ಣಾ ಕಿತ್ತೂರು ಮತ್ತು ಉಗಾರ ಬಿಕೆ ಗ್ರಾಮ ವ್ಯಾಪ್ತಿ ನೆರೆ ಸಂತ್ರಸ್ಥರಿಗೆ ಹಂಚಿಕೆಯಾದ 30 ಮನೆಗಳು ಇನ್ನು ಆರಂಭವಾಗಿಲ್ಲ. ಫಲಾನುಭವಿಗಳಿಗೆ ನೋಟೀಸು ನೀಡಿ ಮನೆ ಕಟ್ಟಿಕೊಳ್ಳಲು ಆಗದಿದ್ದಲ್ಲಿ ವರದಿ ಸಲ್ಲಿಸುವಂತೆ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಕೆಲವು ಕಡೆ ಅಂಗವಾಡಿ ಸ್ವಂತ ಕಟ್ಟಡಗಳ ಸಮಸ್ಯೆಯಿದ್ದು, ಗ್ರಾಮ ಪಂಚಾಯಿತಿಯಿಂದ ಸ್ಥಳಾವಕಾಶ ಒದಗಿಸಿ ಕಟ್ಟಡ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಂಜೀವ ಕುಮಾರ ಸದಲಗೆ ಇಒ ಅವರ ಗಮನಕ್ಕೆ ತಂದರು.

ಇದಕ್ಕೆ ಪ್ರತಿಕ್ರಯಿಸಿದ ಇಒ, ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಗ್ರಾಮಗಳ ವಾರು ಮಾಹಿತಿ ಸಲ್ಲಿಸಲು ತಿಳಿಸಿದರು. ಜೊತೆಗೆ ನರೇಗಾ ಮತ್ತು 15 ನೇ ಹಣಕಾಸಿನಲ್ಲಿ ಒಗ್ಗೂಡಿಸುವಿಕೆ ಅಡಿಯಲ್ಲಿ ಕಾಮಗಾರಿಗಳ ಅಳವಡಿಸಿಕೊಳ್ಳಲು ತಿಳಿಸಿದರು.

ತಾಲೂಕು ವೈದ್ಯಾಧಿಕಾರಿ ಪುಷ್ಪಲತಾ ಸುನದಕಲ್ಲ ಮಾತನಾಡಿ, 4 ಪ್ರಾಥಮಿಕ ಒಂದು ಸಮುದಾಯ ಆರೋಗ್ಯ ಕೇಂದ್ರವಿದ್ದು, ಎಲ್ಲೆಡೆ ಲಸಿಕೆ ಕಾರ್ಯಕ್ರಮ ನಡೆಯುತ್ತಿದೆ, ಪ್ರತಿಗ್ರಾಮಗಳಲ್ಲಿಯೂ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಪಂಚಾಯತ್ ರಾಜ್ ಇಲಾಖೆ ಎಇಇ ವೀರಣ್ಣ ವಾಲಿ ಮಾತನಾಡಿ, ಕಾಗವಾಡ ತಾಲೂಕಿನ ವ್ಯಾಪ್ತಿ ಸಿವಿಲ್ ಕಾಮಗಾರಿಗಳು 26 ಆರಂಭವಾಗಿದ್ದು, 3 ಕಾಮಗಾರಿ ಮುಕ್ತವಾಗಿದೆ. 10 ಶೌಚಾಲಯಗಳ ಗುರಿ ಇದ್ದು, ಅಂದಾಜು ಪತ್ರಿಕೆ ಬದಲಾವಣೆಯಾಗಬೇಕಿದೆ ಎಂದು ಮಾಹಿತಿ ನೀಡಿದರು.

ಕೃಷಿ ಇಲಾಖೆ ಎಡಿ ನಿಂಗಣ್ಣ ಬಿರಾದಾರ, ಆರ್ ಎಫ್ ಒ, ಎಕೆ ಕುಂಬಾರ, ಸಮಾಜ ಕಲ್ಯಾಣ ಇಲಾಖೆ ಎಡಿ ಬಿ.ಎಸ್. ಯಾದವಾಡ, ಪಶುಸಂಗೋಪಲನಾ ಅಧಿಕಾರಿ ಡಿ.ಜೆ. ಕಾಂಬಳೆ, ಬಿಇಒ ಮುಂಜೆ, ನರೇಗಾ ಸಹಾಯಕ ನಿರ್ದೇಶಕ ಗೋಪಾಲ ಮಾಳಿ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ, ರಾಕೇಶ ಕಾಂಬಳೆ, ಶೈಲಶ್ರೀ ಭಜಂತ್ರಿ, ಶ್ರೀದೇವಿ ವಾಲಿ, ಯಶವಂತ ವಂಟಗೂಡೆ, ಮುಂತಾದವರು ಭಾಗಿಯಾಗಿದ್ದರು.

# ಜ.29 ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಬೆಳಗಾವಿ: ಹುಬ್ಬಳ್ಳಿ ಕ್ಷೇತ್ರಿಯ ಭವಿಷ್ಯ ನಿಧಿ ಕಾರ್ಯಾಲಯ ವತಿಯಿದ ಜ.29 ರಂದು ಬೆಳಗ್ಗೆ 9:30 ರಿಂದ ಸಂಜೆ 4 ಗಂಟೆಗೆ ನಿಧಿ ಆಪ್ಕೆ ನಿಕಟ್ ಕಾಯ ೯ಕ್ರಮ ಅರೋರಾ ಅಪರಲ್ಸ್ ಪ್ರೈವೇಟ್ ಲಿಮಿಟೆಡ್ ನಂ.18 ಆದರ್ಶ ನಗರ, ಪಿ,ಬಿ ರಸ್ತೆ ನಿಪ್ಪಾಣಿಯಲ್ಲಿ ಆಯೋಜಿಸಲಾಗಿದೆ.

ಸಂಬಂಧಿಸಿದ ಪಿಂಚಣಿದಾರರು, ಚಂದಾದಾರಾರು, ಉದ್ಯೋಗ ದಾತರು ಹಾಗೂ ಕಾರ್ಮಿಕ ಸಂಘಟನೆಯ ವರು ಕಾರ್ಯಕ್ರಮದಲ್ಲಿ ಭಾಗವಹಿಸಬಹುದು ಎಂದು ಹುಬ್ಬಳ್ಳಿ ಪ್ರಾಧೇಶಿಕ ಕಛೆರಿ ಭವಿಷ್ಯ ನಿಧಿ ಆಯುಕ್ತರು (ಗ್ರೇಡ್-1) ರಾಮಕೇಶ್ ಮೀನಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ